ಸಂಪುಟ : 10 ಸಂಚಿಕೆ: 136 ಪುಟ : 4+2 ಬೆಲೆ: 3.00 ಬುಧವಾರ ಜುಲೈ 02 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 136 Pages : 4+2 Price : 3.00 Wednesday July 02 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಬರುವ ಸರ್ಕಾರಿ ಬಾಲಕರ/ ಬಾಕಿಯರ ಬಾಲಮಂದಿರಗಳಲ್ಲಿ ಗಣಿತ/ ವಿಜ್ಞಾನ ಅರೆಕಾಲಿಕ ಟ್ಯೂಷನ್ ಸೇವೆಯನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಹುದ್ದೆ ತಾತ್ಕಾಲಿಕವಾಗಿದ್ದು ( 1 ವರ್ಷಕ್ಕೆ ಮಾತ್ರ ಅನ್ವಯವಾಗುವಂತೆ ) ಯಾವುದೇ ಸಂದರ್ಭದಲ್ಲಿ ಖಾಯಂಗೊಳಿಸಲಾಗುವುದಿಲ್ಲ. ಅರ್ಜಿಗಳನ್ನು ಜುಲೈ 7 ರ ಸಾಯಂಕಾಲ 5:30 ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾಡಳಿತ ಭವನ, ಎರಡನೇ ಮಹಡಿ ರೂ. ನಂ-225 ಈ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಚೇರಿಗೆ ಸಂಪರ್ಕಿಸುವುದು.

ಅನುಭವ ಹೊಂದಿದ ಶಿಕ್ಷಕರಿಗೆ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಬಾಲಕಿಯರ ಬಾಲಮಂದಿರ ಸಂಸ್ಥೆಗೆ ಕಡ್ಡಾಯವಾಗಿ ಮಹಿಳಾ ಶಿಕ್ಷಕಿಯನ್ನು ಆಯ್ಕೆ ಮಾಡಲಾಗುವುದು. ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಅರೆಕಾಲಿಕ ಶಿಕ್ಷಕರು ಹುದ್ದೆಗಳ ತಾತ್ಕಾಲಿಕವಾಗಿದೆ.

ಸದರಿ ನೇಮಕಾತಿ ಆದೇಶ ಕೇವಲ ಒಂದು ವರ್ಷಕ್ಕೆ ಮಾತ್ರ ಅನ್ವಯವಾಗುತ್ತದೆ. ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾಡಳಿತ ಭವನ, ಎರಡನೇ ಮಹಡಿ ರೂ. ನಂ-225, ಗದಗ ಇಲ್ಲಿ ಸಲ್ಲಿಸಬಹುದು. ಅರ್ಜಿಯೊಂದಿಗೆ ಫೋಟೋ, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಆಧಾರ್ ಕಾರ್ಡ್, ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ಸೇವಾ ಅನುಭವ ಪ್ರಮಾಣ ಪತ್ರದ ದೃಢೀಕೃತ ದಾಖಲೆಗಳನ್ನು ಲಗತ್ತಿಸಬೇಕು.

'ಬದಲಾವಣೆಯ ಶಿಕ್ಷಣ: ಭವಿಷ್ಯದ ನಿರ್ಮಾಣ 2025-26' ಕಾರ್ಯಾಗಾರದ ಸಮಾರೋಪದಲ್ಲಿ ಸಚಿವ ಸಂತೋಷ ಲಾಡ್

# ನಿರೀಕ್ಷಿತ ಫಲಿತಾಂಶ ಸಿಗದಿರಲು ನಾವೇ ಕಾರಣ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜಕೀಯ ಬಿಟ್ಟು ಸರಿಯಾಗಿ ಕೆಲಸ ಮಾಡಬೇಕು. ಅಂದಾಗ ಶಾಲೆಗಳು ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಗುತ್ತದೆ. ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ನಿರೀಕ್ಷಿತ ಫಲಿತಾಂಶ ಸಿಗದೇ ಇರಲು ಕಾರಣ ನಾವೇ ಆಗಿದ್ದೇವೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ತಿಳಿಸಿದರು.




ಅವರು ಮಂಗಳವಾರ ಸಂಜೆ, ಧಾರವಾಡ ಜೆ.ಎಸ್.ಎಸ್ ಸನ್ನಿಧಿ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ 'ಬದಲಾವಣೆಯ ಶಿಕ್ಷಣ; ಭವಿಷ್ಯದ ನಿರ್ಮಾಣ 2025-26' ಅಂಗವಾಗಿ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪ್ರಧಾನ ಗುರುಗಳು, ಮುಖ್ಯೋಪಾಧ್ಯಾಯರು ಹಾಗೂ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿ (ಎಸ್.ಡಿ.ಎಂ.ಸಿ) ಅಧ್ಯಕ್ಷರಿಗೆ ಆಯೋಜಿಸಿದ್ದ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರದ ಸಮಾರೋಪ ಹಾಗೂ ಕಳೆದ ವರ್ಷದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ. 100ರಷ್ಟು ಫಲಿತಾಂಶ ಪಡೆದ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮತ್ತು ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣೆ ಸಮಿತಿಯು ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಹಾಗೂ ಅವರ ಶೈಕ್ಷಣಿಕ ಪ್ರಗತಿ ಸಾಧಿಸಲು ಹಾಗೂ ಮಕ್ಕಳ ಶ್ರೇಯೊಭಿವೃದ್ದಿಗಾಗಿ ಉತ್ತಮ ಕೆಲಸ ಮಾಡಬೇಕು. ನಮ್ಮ ಶಾಲೆಗಳ ಬಗ್ಗೆ ನಮ್ಮಗೆ ಹೆಮ್ಮೆ, ಗರ್ವ ಮೂಡುವಂತಾಗಬೇಕು. ಸರಕಾರದ ಸಾಕಷ್ಟು ಯೋಜನೆಗಳಿವೆ. ಇದೀಗ ಎಲ್ಲ ಸಮಸ್ಯೆಗಳನ್ನು ನಿವಾರಿಸಲು ನಾವೆಲ್ಲರೂ ಇರುವಾಗ ಶಿಕ್ಷಕರು ಉತ್ತಮ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ನೀಡಬೇಕು ಎಂದು ತಿಳಿಸಿದರು.

ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಗುಣಮಟ್ಟದ ಶಿಕ್ಷಣ ಕಡೆಗೆ ಗಮನ ಹರಿಸಿ, ಮಿಷನ್ ವಿದ್ಯಾಕಾಶಿಯನ್ನು ಅನುಷ್ಠಾನಕ್ಕೆ ತಂದಾಗ ಎಲ್ಲರೂ ಸಹಕಾರ ನೀಡಿದ್ದಾರೆ. ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ನಿರೀಕ್ಷಿತ ಫಲಿತಾಂಶ ಸಿಗದೇ ಇದ್ದರೂ ಸುಧಾರಣೆ ಆಗಿದೆ. ಅದರಂತೆ ಈ ವರ್ಷವೂ ಇನ್ನಷ್ಟು ಪ್ರಯತ್ನ ಮೂಲಕ ಧಾರವಾಡ ಜಿಲ್ಲೆಯ ವಿದ್ಯಾಕಾಶಿ ಗತವೈಭವ ಮರಳಿ ▸▸3ನೇ ಪುಟಕ್ಕೆ

> ಮಕ್ಕಳಿಗೆ ಸಮಾಜದಲ್ಲಿ ಜೀವಿಸುವುದನ್ನು ಕಲಿಸಿ, ಶಾಲೆಯ ವ್ಯವಸ್ಥೆ ಹಾಗೂ ಸಮಸ್ಯೆಗಳ ಬಗ್ಗೆ ಏನಾದರೂ ತೊಂದರೆಗಳಿದ್ದರೆ ಗಮನಕ್ಕೆ ತಂದರೆ, ಸರಿಪಡಿಸಲು ಪ್ರಯತ್ನಿಸುತ್ತೇವೆ. ಆದರೆ ಮಕ್ಕಳ ಜೀವನ ರೂಪಿಸುವುದು ಶಿಕ್ಷಕರ ಕೈಯಲ್ಲಿ ಇರುವುದರಿಂದ ಮಕ್ಕಳಲ್ಲಿ ಇರುವ ಕೌಶಲ್ಯದ ಬಗ್ಗೆ, ತಂತ್ರಜ್ಞಾನದ ಬಗ್ಗೆ ಆಸಕ್ತಿ ಇದ್ದರೆ ಅವರನ್ನು ಗುರುತಿಸಿ ಮತ್ತು ಆ ವಿಷಯದ ಬಗ್ಗೆ ಅವರಿಗೆ ತಿಳಿಹೇಳಿ.
>
> **– ಸಂತೋಷ್ ಲಾಡ್,**
> ಉಸ್ತುವಾರಿ ಸಚಿವರು, ಧಾರವಾಡ.

ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಶಾಲೆ ಎಂದರೆ ದೇವಸ್ಥಾನ ಇದ್ದಂತೆ. ಶಾಲೆಯ ಆವರಣದಲ್ಲಿ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಕೆಲಸ ಆಗಬೇಕು. ಶಿಕ್ಷಕರ ಸಮಸ್ಯೆಗಳಿಗೆ ಸರಕಾರ ಸ್ಪಂದಿಸಲು ಬದ್ಧವಾಗಿದೆ. ಅಂತೆಯೇ ಶಿಕ್ಷಕರು ಉತ್ತಮ ಶಿಕ್ಷಣ ನೀಡಲು ಸಿದ್ಧತೆ ಮಾಡಿಕೊಳ್ಳಬೇಕು ಎಂದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ಯಲ್ಲಿ ಒಂದು ವರ್ಷ ಅವಧಿಯ ಪೋಸ್ಟ್ ಡಿಪ್ಲೋಮಾ ಇನ್ ಮೆಕಟ್ರಾನಿಕ್ಸ್ ವೃತ್ತಿ ತರಬೇತಿಯ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೆಕ್ಯಾನಿಕಲ್, ಆಟೊ ಮೊಬೈಲ್, ಎಲೆಕ್ಟ್ರಿಕಲ್, ಮೆಕಟ್ರಾನಿಕ್ಸ್ ಮತ್ತು ಎಲೆಕ್ಟ್ರಾನಿಕ್ಸ್ ವಿಷಯಗಳಲ್ಲಿ ಡಿಪ್ಲೋಮಾ ಅಥವಾ ಇಂಜಿನಿಯರಿಂಗ್(ಬಿ.ಇ) ಉತ್ತೀರ್ಣರಾದ ಅಭ್ಯರ್ಥಿಗಳು ಈ ತರಬೇತಿ ಪಡೆಯಲು ಅರ್ಹರಿರುತ್ತಾರೆ.

ಒಂದು ವರ್ಷ ಅವಧಿಯ ಈ ಕೋರ್ಸ್ ನಲ್ಲಿ ಎಲೆಕ್ಟ್ರಿಕಲ್ ಇನ್‌ಸ್ಟಾಲೇಶನ್, ಎಲೆಕ್ಟ್ರಿಕಲ್ ಪ್ಯಾನೆಲ್ ಡಿಸೈನ್, ಮೆಕ್ಯಾನಿಕಲ್ ಆಂಡ್ ಸಿಸ್ಟಮ್ ಡಿಸೈನ್, ಪಿಎಲ್‌ಸಿ, ಸ್ಕಾಡಾ, ಅಟೊಮೇಶನ್, ಸಿಎನ್‌ಸಿ ಮೈಂಟೇನನ್ಸ್, ಇಂಟರ್ನೆಟ್ ಆಫ್ ಥಿಂಗ್ಸ್ (ಐಓಟಿ), ರೋಬೋಟಿಕ್ಸ್ ಮತ್ತು ಪ್ರೊಜೆಕ್ಟ್ ಡೆವಲಪ್‌ಮೆಂಟ್ ವಿಷಯಗಳಲ್ಲಿ ಪರಿಣಿತಿ ಹೊಂದುವಷ್ಟು ಪ್ರಾಯೋಗಿಕ ತರಬೇತಿ ನೀಡಲಾಗುತ್ತದೆ. ತರಬೇತಿಯ ಕೊನೆಯಲ್ಲಿ ಕ್ಯಾಂಪಸ್ ಸಂದರ್ಶನಗಳ ಮೂಲಕ ಪ್ರತಿಷ್ಠಿತ ಕೈಗಾರಿಕೆಗಳಲ್ಲಿ ಉದ್ಯೋಗ ಅವಕಾಶ ಕಲ್ಪಿಸಲಾಗುವುದು.

ಜಿಟಿಟಿಸಿ ಸಂಸ್ಥೆಯು ಉನ್ನತ ತಂತ್ರಜ್ಞಾನ ಮತ್ತು ಮೂಲ ಸೌಕರ್ಯಗಳನ್ನು ಅಳವಡಿಸಿಕೊಂಡಿದ್ದು, ವೃತ್ತಿಪರ ತರಬೇತಿಗಳಿಗೆ ಹೆಸರುವಾಸಿಯಾಗಿದೆ.

ಪೋಸ್ಟ್ ಡಿಪ್ಲೋಮಾ ಇನ್ ಮೆಕಟ್ರಾನಿಕ್ಸ್ ತರಬೇತಿಯು ಜುಲೈ 15 ರಿಂದ ಪ್ರಾರಂಭವಾಗಲಿದೆ. ಆಸಕ್ತ ಅಭ್ಯರ್ಥಿಗಳು ಜುಲೈ 12 ರೊಳಗಾಗಿ ಪ್ರವೇಶ ಪಡೆದುಕೊಳ್ಳಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಇಂಡಸ್ಟ್ರಿಯಲ್ ಎಸ್ಟೇಟ್, ಗೋಕುಲ ರಸ್ತೆ, ಹುಬ್ಬಳ್ಳಿ ದೂರವಾಣಿ ಸಂ. 8183860552 / 0836-2333159/ 155267 ಸಂಪರ್ಕಿಸಬಹುದಾಗಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ-3ರ ಕುರಿತು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

# ಎಸ್‌ಎಸ್‌ಎಲ್‌ಸಿ ಪರೀಕ್ಷೆ-3 ವ್ಯವಸ್ಥಿತವಾಗಿ ಜರುಗಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜುಲೈ 5ರಿಂದ 12ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ-3 ಜರುಗಲಿದ್ದು, ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-3ರ ಕುರಿತು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ನಕಲು, ಅವ್ಯವಹಾರ, ಅಕ್ರಮ ನಡೆಯದಂತೆ ಕ್ರಮ ವಹಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಆಸನದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಸರಬರಾಜು ಸೇರಿದಂತೆ ಮೂಲಭೂತ ಸೌಲಭ್ಯ ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಅಳವಡಿಕೆಗೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಪರೀಕ್ಷಾ ಸಮಯದಲ್ಲಿ ಯಾವುದೇ ಲೋಪದೋಷಗಳಾಗದಂತೆ ಸಂಬಂಧಿತ ಅಧಿಕಾರಿಗಳು ನಿಗಾ ವಹಿಸಿ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ-3 ಪರೀಕ್ಷೆಗಳು ಜುಲೈ 5ರಿಂದ 12ರವರೆಗೆ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು. ಒಟ್ಟು 3528 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಜರುಗಿಸಲು ಸಕಲ ಸಿದ್ಧತೆ ಮಾಡಲಾಗಿದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಜಿ.ಎಲ್. ಬಾರಾಟಕ್ಕೆ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಹಾಜರಿದ್ದರು.

### ಪರೀಕ್ಷಾ ಕೇಂದ್ರಗಳ ವಿವರ

ಗದುಗಿನ ವಿಡಿಎಸ್‌ಟಿ ಬಾಲಕಿಯರ ಸಂಯುಕ್ತ ಪ.ಪೂ ಕಾಲೇಜು, ಬಸವೇಶ್ವರ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆ, ವಿಡಿಎಸ್‌ಟಿ ಬಾಲಕರ ಸಂಯುಕ್ತ ಪ.ಪೂ ಕಾಲೇಜು, ಮುಳಗುಂದದ ಎಸ್‌ಜೆಜೆಎಮ್ ಪ.ಪೂ ಕಾಲೇಜು, ಕಳಸಾಪೂರದ ಬ್ರೈಟ್ ಹಾರಿಝೋನ್ ಪ್ರೌಢಶಾಲೆ, ಮುಂಡರಗಿಯ ಜ.ಅ. ಪ್ರೌಢಶಾಲೆ, ಮುಂಡರಗಿಯ ವಿ.ಜಿ. ಲಿಂಬಿಕಾಯಿ ಪ್ರೌಢಶಾಲೆ, ನರಗುಂದದ ನವೋದಯ ಪ್ರೌಢಶಾಲೆ, ರೋಣದ ವಿ.ಎಫ್. ಪಾಟೀಲ ಎಸ್.ಎಸ್, ಗಜೇಂದ್ರಗಡದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ಲಕ್ಷ್ಮೇಶ್ವರದ ಉಮಾವಿದ್ಯಾಲಯ ಮುನ್ಸಿಪಲ್ ಪ್ರೌಢಶಾಲೆ, ಶಿರಹಟ್ಟಿಯ ಎಫ್.ಎಮ್. ಡಬಾಲಿ ಸಂಯುಕ್ತ ಪ.ಪೂ ಕಾಲೇಜು.

# ವಿದ್ಯಾಭ್ಯಾಸಕ್ಕೆ ಮೊದಲ ಆದ್ಯತೆ ನೀಡಿ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಯಾವುದೇ ಸಮಾಜದವರಿರಲಿ, ಎಲ್ಲರೂ ಮೊದಲು ವಿದ್ಯಾಭ್ಯಾಸಕ್ಕೆ ಆದ್ಯತೆ ನೀಡಬೇಕು. ಶಿಕ್ಷಣದಿಂದ ವಂಚಿತರಾದ ಭೋವಿ ಮತ್ತಿತರ ಸಮಾಜದವರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಅವರನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ಮಾಡಬೇಕೆಂದು ರೋಣ ಶಾಸಕ, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಭೋವಿ ಕಾಲೋನಿಯಲ್ಲಿ ನಿರ್ಮಿಸಲಾದ ಅಂಗನವಾಡಿ ಕೇಂದ್ರ 131ನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಿಂದುಳಿದ ವರ್ಗದಲ್ಲಿ ಜನಿಸಿ, ಸಾಧನೆಗೈದ ಡಾ. ಬಾಬಾಸಾಹೇಬ ಅಂಬೇಡ್ಕರರನ್ನು ನೋಡಿಯೇ ನೀವು ಕಲಿಯಬೇಕು. ಓದಿನಿಂದಲೇ ಮುಂದೆ ಬಂದ ಅವರು ಈ ದೇಶಕ್ಕೆ ಒಪ್ಪುವ ಸಂವಿಧಾನವನ್ನು ನೀಡಿದ ಮಹನೀಯರು. ಕೇಂದ್ರದ ಕಾನೂನು ಸಚಿವರಾಗಿಯೂ ಅವರು ಮಾಡಿದ ಕಾರ್ಯ ಸಣ್ಣದೇನಲ್ಲ. ಅಂದರೆ ವಿದ್ಯೆ ಯಾವ ವ್ಯಕ್ತಿಯನ್ನು ಬೇಕಾದರೂ ಅತ್ಯಂತ ಎತ್ತರದ ಮಟ್ಟಕ್ಕೆ ಒಯ್ಯಬಲ್ಲುದು ಎಂಬುದನ್ನು ಇದರಿಂದ ತಿಳಿಯಬೇಕು. ಇಂತಹ ಮಹನೀಯರ ಕಥೆಗಳನ್ನು ನಿಮ್ಮ ಮಕ್ಕಳಿಗೆ ಹೇಳಿ ಅವರಲ್ಲಿ ವಿದ್ಯಾಭ್ಯಾಸದ ಕಿಚ್ಚನ್ನು ಹಚ್ಚಲು ಪಾಲಕರು ಮುಂದಾಗಬೇಕೆಂದು ಹೇಳಿದರು.


ಸಮಾರಂಭದಲ್ಲಿ ಶಾಸಕರು ಮತ್ತು ಗಣ್ಯರನ್ನು ಸನ್ಮಾನಿಸಲಾಯಿತು. ಇದಕ್ಕೂ ಮೊದಲು ಶಾಸಕ ಜಿ.ಎಸ್. ಪಾಟೀಲ ಪಟ್ಟಣದ ಈಶ್ವರ ನಗರದಲ್ಲಿನ ಸಾಯಿಬಾಬಾ ದೇವಸ್ಥಾನದ ಸಮೀಪದ ಅಂಗನವಾಡಿ ಕೇಂದ್ರವನ್ನು ಉದ್ಘಾಟಿಸಿದರು. ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಯುವ ಧುರೀಣ ಮಿಥುನ ಪಾಟೀಲ, ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ವಾರ್ಡ್ ಸದಸ್ಯರಾದ ದಾವುದ್ ಅಲಿ ಕುದರಿ, ಮೈಲಾರಪ್ಪ ಚಳ್ಳಮರದ, ಸಂತೋಷ ಮಣ್ಣೊಡ್ಡರ, ಅಕ್ಕಮ್ಮ ಮಣ್ಣೊಡ್ಡರ ಇತರರಿದ್ದರು.

ಸಫಾಯಿ ಕರ್ಮಚಾರಿ/ಮ್ಯಾನ್ಯುವಲ್ ಸ್ಕ್ಯಾವೆಂಜರ್ಸ್‌ಗಳ 2ನೇ ತ್ರೈಮಾಸಿಕ ಸಭೆ

# ಸಫಾಯಿ ಕರ್ಮಚಾರಿಗಳಿಗೆ ಸೌಲಭ್ಯಗಳನ್ನು ತಲುಪಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಸಿಗುವ ಸೌಲಭ್ಯ ತಲುಪಿಸುವಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳ ಪಾತ್ರ ಪ್ರಮುಖವಾಗಿದೆ. ಅಧಿಕಾರಿಗಳು ಪ್ರಾಮಾಣಿಕವಾಗಿ ಅವರಿಗೆ ದೊರಕಬೇಕಾದ ಸೌಲಭ್ಯಗಳನ್ನು ಒದಗಿಸುವಲ್ಲಿ ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಸೋಮವಾರ ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿ / ಮ್ಯಾನ್ಯುವಲ್ ಸ್ಕ್ಯಾವೆಂಜರ್ಸ್‌ಗಳ 2ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಫಾಯಿ ಕರ್ಮಚಾರಿಗಳಿಗೆ ನಿಗದಿತ ಸಮಯಕ್ಕೆ ನಿಗದಿಪಡಿಸಿದ ವೇತನ ಪಾವತಿಸುವುದು ಹಾಗೂ ವಿವಿಧ ಸೌಲಭ್ಯಗಳನ್ನು ದೊರಕಿಸಿಕೊಡಲು ಅಧಿಕಾರಿಗಳು ಕ್ರಮ ವಹಿಸಬೇಕು. ಗುತ್ತಿಗೆ ಸಫಾಯಿ ಕರ್ಮಚಾರಿಗಳಿಗೆ ಗುತ್ತಿಗೆ ಏಜೆನ್ಸಿದಾರರು ಸಮಯಕ್ಕೆ ಸರಿಯಾಗಿ ನಿಗದಿಪಡಿಸಿದ ವೇತನ ಸೌಲಭ್ಯಗಳನ್ನು ವಿತರಿಸುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಹಾಗೂ ವೇತನದೊಂದಿಗೆ ಇ.ಎಸ್.ಐ/ಪಿಎಫ್ ಪಾವತಿಸುವ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಇದ್ದಲ್ಲಿ ಮಾತ್ರವೇ ಗುತ್ತಿಗೆದಾರರಿಗೆ ಹಣ ಸಂದಾಯ ಮಾಡಬೇಕು. ನಿಯಮಿತವಾಗಿ ಸಫಾಯಿ ಕರ್ಮಚಾರಿಗಳ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಬೇಕು ಎಂದು ಸೂಚಿಸಿದರು.

ಸಫಾಯಿ ಕರ್ಮಚಾರಿಗಳಿಗೆ ಗಮ್‌ಬೂಟ್, ಮಾಸ್ಕ್, ಜಾ-ಕೆಟ್, ಹ್ಯಾಂಡ್ ಗ್ಲೌಸ್, ಹೆಲ್ಮೆಟ್, ಏಪ್ರಾನ್, ವಿವಿಧ ಸುರಕ್ಷಾ ಪರಿಕರಗಳನ್ನು ವಿತರಿಸಲಾಗಿದ್ದು, ಅವುಗಳನ್ನು ಪೌರಕಾರ್ಮಿಕರು ಧರಿಸಿ ಕೆಲಸ ನಿರ್ವಹಿಸುವಂತೆ ನೋಡಿಕೊಳ್ಳಲಾಗುತ್ತಿದೆ ಎಂದು ನಗರಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಸಭೆಯಲ್ಲಿ ವಿವರಣೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಸ್ವಾಗತಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ್ರ ಕೊಟ್ಟೂರ, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು, ನಾಮನಿರ್ದೇಶಿತ ಸದಸ್ಯರು, ಜಿಲ್ಲಾ ಸಂಯೋಜಕರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಇದೇ ಸಂದರ್ಭದಲ್ಲಿ ನಗರಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್ / ಮಲದ ಗುಂಡಿಗಳನ್ನು ಸ್ವಚ್ಛಗೊಳಿಸಲು ಸಕ್ಕಿಂಗ್ ಹಾಗೂ ಜೆಟ್ಟಿಂಗ್ ಯಂತ್ರಗಳನ್ನು ಸಮರ್ಪಕವಾಗಿ ಬಳಸುತ್ತಿರುವ ಹಾಗೂ ಸಫಾಯಿ ಕರ್ಮಚಾರಿಗಳಿಗೆ ನಿವೇಶನ ಹಂಚಿಕೆ, ವೈಯಕ್ತಿಕ ಶೌಚಾಲಯ ನಿರ್ಮಾಣ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

# I LOVE YOU ಅನ್ನೋದ್ರಲ್ಲಿ ಲೈಂಗಿಕ ಉದ್ದೇಶವಿಲ್ಲ: ಬಾಂಬೆ ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಮುಂಬೈ

I Love You ಅನ್ನೋದ್ರಲ್ಲಿ ಲೈಂಗಿಕ ಉದ್ದೇಶವಿಲ್ಲ ಎಂದು ಬಾಂಬೆ ಹೈಕೋರ್ಟ್‌ನ ನಾಗ್ಪುರ ಪೀಠ ಅಭಿಪ್ರಾಯಪಟ್ಟಿದೆ.

ವ್ಯಕ್ತಿಯೊಬ್ಬ ಕಳೆದ 10 ವರ್ಷಗಳ ಹಿಂದೆ 17 ವರ್ಷದ ಬಾಲಕಿಯೊಬ್ಬಳ ಕೈಹಿಡಿದು 'I Love You' ಎಂದು ಹೇಳಿದ್ದಕ್ಕೆ ಲೈಂಗಿಕ ಕಿರುಕುಳ ಆರೋಪದಡಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ವಿಚಾರಣೆ ನಡೆಸಿದ ಸೆಷನ್ ನ್ಯಾಯಾಲಯವು, ತಪ್ಪಿತಸ್ಥ ಎಂದು ಪರಿಗಣಿಸಿ ಪೋಕ್ಸೋ ಕಾಯ್ದೆಯಡಿ 2017ರಲ್ಲಿ ಮೂರು ವರ್ಷಗಳ ಜೈಲು ಶಿಕ್ಷೆ ಪ್ರಕಟಿಸಿತ್ತು. ಕೆಳಹಂತದ ನ್ಯಾಯಾಲಯದ ಆದೇಶವನ್ನು ವ್ಯಕ್ತಿಯು ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು.

ಸೆಷನ್ ನ್ಯಾಯಾಲಯದ ಆದೇಶವನ್ನು ರದ್ದುಗೊಳಿಸಿದ ಹೈಕೋರ್ಟ್, ವ್ಯಕ್ತಿಯ ವಿರುದ್ಧದ ಆರೋಪದಲ್ಲಿ ಯಾವುದೇ ಲೈಂಗಿಕ ಉದ್ದೇಶ ಕಂಡು ಬಂದಿಲ್ಲ. 'ನಾನು ನಿನ್ನನ್ನು ಪ್ರೀತಿಸುತ್ತೇನೆ' ಎಂದು ಪದಗಳಲ್ಲಿ ಹೇಳಿದರೆ ಅದರಲ್ಲಿ ಯಾವುದೇ ಲೈಂಗಿಕ ಉದ್ದೇಶ ಇರುವುದಿಲ್ಲ ಎಂದು ನ್ಯಾ. ಊರ್ಮಿಳಾ ಜೋಶಿ ಫಾಲ್ಕೆ ಅವರಿದ್ದ ಪೀಠ ತನ್ನ ಆದೇಶದಲ್ಲಿ ಹೇಳಿದೆ.

# ನಿಲ್ಲದ ಮೈಕ್ರೋ ಫೈನಾನ್ಸ್ ಕಿರುಕುಳ: ಹಣ ಕಟ್ಟಲು ವಿಫಲರಾದ ಮನೆಗೆ ಬೀಗ ಬೀದಿಯಲ್ಲಿ ವೃದ್ಧ ದಂಪತಿ!

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳ ನಿಲ್ಲುತ್ತಿಲ್ಲ. ಇಷ್ಟು ದಿನ ಕೊಂಚ ತಣ್ಣಗಾಗಿದ್ದ ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳ ಕಿರುಕುಳ ಇದೀಗ ಮತ್ತೆ ಮುಂದುವರಿದಿದೆ.

ಅದರಂತೆ ದಾವಣಗೆರೆ ಜಿಲ್ಲೆ ಹರಿಹರದ ಹಮಾಲರ ಕಾಲೋನಿಯಲ್ಲಿ ವಾಸವಾಗಿರುವ ವೃದ್ಧ ದಂಪತಿಯನ್ನು ಮೈಕ್ರೋ ಫೈನಾನ್ಸ್ ಸಿಬ್ಬಂದಿ ಮನೆಯಿಂದ ಹೊರಗೆ ಹಾಕಿ, ಬೀಗ ಜಡಿದು ನೋಟಿಸ್ ಅಂಟಿಸಿ ಹೋಗಿದ್ದಾರೆ.

ಅಕ್ಬರ್ ಸಾಬ್ (85), ಫಾತಿಮಾ (65) ದಂಪತಿ ನಾಲ್ಕು ವರ್ಷಗಳ ಹಿಂದೆ ಮೈಕ್ರೋ ಫೈನಾನ್ಸ್‌ನಲ್ಲಿ 7 ಲಕ್ಷ ರೂ. ಸಾಲ ಪಡೆದಿದ್ದರು. ಪ್ರತಿ ತಿಂಗಳು 18 ಸಾವಿರ ಹಣ ಪಾವತಿಸುತ್ತಿದ್ದರು. ಕಳೆದ ಐದು ತಿಂಗಳಿನಿಂದ ವೃದ್ಧ ದಂಪತಿಗೆ ಹಣ ಕಟ್ಟಲು ಸಾಧ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಜೂನ್ 2ರಂದು ವೃದ್ಧ ದಂಪತಿಯನ್ನು ಮನೆಯಿಂದ ಹೊರಗೆ ದಬ್ಬಿ, ಬೀಗ ಹಾಕಿಕೊಂಡು ಹೋಗಿದ್ದಾರೆ.

ಇದರಿಂದ, ವೃದ್ಧ ದಂಪತಿ ಕಳೆದ ಒಂದು ತಿಂಗಳಿನಿಂದ ಸೂರು ಇಲ್ಲದೆ ಮನೆಯ ಬಾಗಿಲಿನಲ್ಲೇ ಜೀವನ ಸಾಗಿಸುತ್ತಿದ್ದಾರೆ.

ನಾಳೆ ಡಾ. ಫ.ಗು. ಹಳಕಟ್ಟಿಯವರ 145ನೇ ಜನ್ಮದಿನ ನಿಮಿತ್ತ ವಿಶೇಷ ಲೇಖನ

# ವಚನ ಸಾಹಿತ್ಯ ಸಂರಕ್ಷಣೆ ದಿನ

ಬಸವಾದಿ ಶಿವಶರಣರ ವಚನಗಳು ಅನುಭಾವದ ನುಡಿಮುತ್ತುಗಳು. ಯಾವುದೇ ಸಾಹಿತ್ಯದಿಂದ, ಧರ್ಮದಿಂದ, ಪ್ರಭಾವದಿಂದ ಬಂದವುಗಳಲ್ಲ, ಎರವಲು ಪಡೆದಿದ್ದಲ್ಲ, ಇವು ಜೀವನಾನುಭವದಿಂದ ಬಂದವುಗಳು. 12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರ ನೇತೃದಲ್ಲಿ ಲಕ್ಷದ ಮೇಲೆ ತೊಂಭತ್ತಾರು ಸಾವಿರ ಶರಣರು ಅಂದು ಕಲ್ಯಾಣದಲ್ಲಿ ಸೇರಿ, ಜಗತ್ತಿನ ಮೊಟ್ಟಮೊದಲ ಪಾರ್ಲಿಮೆಂಟ್ ಎಂದು ಖ್ಯಾತಿ ಪಡೆದ 'ಅನುಭವ ಮಂಟಪ'ವೆಂಬ ಜ್ಞಾನಗರಡಿಮನೆಯಲ್ಲಿ ಬಸವಣ್ಣ, ಪ್ರಭುದೇವರು, ಚನ್ನಬಸವಣ್ಣ, ಅಕ್ಕಮಹಾದೇವಿ, ಸಿದ್ಧರಾಮೇಶ್ವರ, ಮಡಿವಾಳ ಮಾಚಯ್ಯ ಮುಂತಾದ ಶಿವಶರಣರು ಚಿಂತನ-ಮಂಥನಗೈದು ಅನುಭಾವದ ವಚನಗಳನ್ನು ರಚಿಸಿ, ಜನ ಬದುಕಲಿ-ಜಗ ಬದುಕಲಿ ಎಂಬ ಮಹದಾಸೆಯಿಂದ ಕಾಯಕ-ದಾಸೋಹ-ಶಿವಯೋಗದ ಮೂಲಕ ಜನಸಾಮಾನ್ಯರು ಶರಣರಾಗಲು ಸಾಧ್ಯವೆಂಬುದನ್ನು ತೋರಿಸಿಕೊಟ್ಟವರು ಬಸವಾದಿ ಶಿವಶರಣರು ಇವರಿಗೆಲ್ಲ ಗುರುವಾಗಿ-ಲಿಂಗವಾಗಿ-ಜಂಗಮವಾಗಿ ಮಾರ್ಗದರ್ಶನ ಮಾಡಿದವರು.

ಲಿಂಗಾಯತ ಧರ್ಮ ಸಂಸ್ಥಾಪಕ, ಇಷ್ಟಲಿಂಗ ಜನಕ, ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರು. ಮೇಲು-ಕೀಳು, ಜಾತಿ-ಮತ-ಪಂಥ ರಹಿತ, ಲಿಂಗ ತಾರತಮ್ಯ ಮಾಡದೇ ಎಲ್ಲರೂ ಸಮಾನರು ಎಂಬ ತತ್ವದಡಿಯಲ್ಲಿ ಬಾಳಿ ಬದುಕಿದವರು ಶರಣರು. 36 ವರ್ಷಗಳ ಕಾಲ ಕಲ್ಯಾಣ ಕೈಲಾಸವಾಗಿತ್ತು. ಬಿಜ್ಜಳನ ರಾಜ್ಯದಲ್ಲಿ ಎಲ್ಲರೂ ಸುಖ-ಶಾಂತಿಯಿಂದ, ಪ್ರೀತಿ-ವಿಶ್ವಾಸದಿಂದ ಲಿಂಗಾಯತ ಧರ್ಮದ ತತ್ವಗಳಲ್ಲಿ ನಂಬಿಕೆ ಇಟ್ಟು ಬದುಕಿದ ಪರಿಣಾಮವೆಂದರೆ ಆ ಕಾಲದಲ್ಲಿ ಒಂದು ಯುದ್ಧಗಳಾಲಿಲ್ಲ, ಯಾವ ರಾಜರೂ ದಂಡೆತ್ತಿ ಬರಲಿಲ್ಲ. ಏಕೆಂದರೆ ಬಸವಣ್ಣನವರ ಪ್ರೀತಿ, ದಯೆ, ನಡೆ-ನುಡಿಗಳಿಂದ ಪ್ರಭಾವಿತರಾಗಿದ್ದರು.

ಆದರೆ ಇದನ್ನೆಲ್ಲ ಸಹಿಸಿದ ಮನಸ್ಸುಗಳು ರಾಜನಿಗೆ ಪಿತೂರಿ ಮಾಡಿ ಕ್ರಾಂತಿಗೆ ಕಾರಣರಾದರು. ಕಲ್ಯಾಣ ಕ್ರಾಂತಿಯ ನಂತರ ಶರಣರು ತಮ್ಮ ಜೀವದ ಹಂಗು ತೊರೆದು ಹೋರಾಡುತ್ತಾ, ವಚನ ಸಾಹಿತ್ಯವನ್ನು ರಕ್ಷಿಸುತ್ತಾ, ಯಾರದೋ ಮನೆಗಳಲ್ಲಿ, ಮಠ-ಮಂದಿರಗಳಲ್ಲಿ, ಗುಡಿ-ಗುಂಡಾರ, ಗುಡ್ಡ-ಬೆಟ್ಟ-ಮರದ ಪೊದೆಗಳಲ್ಲಿ, ಗುಡಿಸಲುಗಳಲ್ಲಿ ವಚನಗಳ ಕಟ್ಟುಗಳನ್ನು ಬಿಟ್ಟು, ಉಳಿದ ವಚನಗಳ ಕಟ್ಟುಗಳನ್ನು ತಲೆಯ ಮೇಲೆ ಹೊತ್ತು, ಬೆನ್ನಿಗೆ ಕಟ್ಟಿಕೊಂಡು ನಾಡಿನ ಮೂಲೆ ಮೂಲೆಗಳಲ್ಲಿ ಶರಣರು ಸಂಚರಿಸಿ ಅಮೂಲ್ಯವಾದ ವಚನ ಸಾಹಿತ್ಯವನ್ನು ಬಿಟ್ಟು ಹೋಗಿದ್ದಾರೆ. ಮುಂದೆ ಇಂತಹ ಶರಣ ಸಾಹಿತ್ಯವನ್ನು ಮಹಾಕವಿ ಹರಿಹರ ತನ್ನ ರಗಳೆಗಳಲ್ಲಿ, ರಾಘವಾಂಕ ತನ್ನ ಕಾವ್ಯಗಳಲ್ಲಿ, ಚಾಮರಸ ಕವಿ ತನ್ನ ಕೃತಿಗಳಲ್ಲಿ ಹೀಗೆ ಮುಂತಾದ ಶರಣ ಕವಿಗಳು ಇಲ್ಲಿಯವರೆಗೂ ಬರೆಯುತ್ತಾ ಉಳಿಸುತ್ತಾ ಬಂದಿದ್ದಾರೆ.

20ನೇ ಶತಮಾನ ಬಸವಾದಿ ಶಿವಶರಣರ ವಚನ ಸಾಹಿತ್ಯ ಸಂಗ್ರಹ, ಸಂಪಾದನೆ, ಸಂಕಲನ, ಮುದ್ರಣಗೊಂಡು ಜನಸಾಮಾನ್ಯರಿಗೆ ದೊರೆತ ಶತಮಾನ. ಈ ಶತಮಾನದ ಕಾರಣಿಕ ಪುರುಷ ವಚನ ಸಂಶೋಧನೆಯ ಪಿತಾಮಹ ಶರಣ ಡಾ. ಫ.ಗು. ಹಳಕಟ್ಟಿಯವರ ಪರಿಶ್ರಮದಿಂದ ವಚನ ಸಾಹಿತ್ಯದ ಸಂರಕ್ಷಣೆ ಸಾಧ್ಯವಾಯಿತು.



ಇವರು ಧಾರವಾಡದಲ್ಲಿ ದಿನಾಂಕ 02-07-1880ರಂದು ತಂದೆ ಗುರುಬಸಪ್ಪ ತಾಯಿ ದಾನಮ್ಮರ ಉದರದಲ್ಲಿ ಜನನ. ಹುಟ್ಟಿದ ಊರಿನಲ್ಲಿಯೇ ಪ್ರಾಥಮಿಕ-ಮಾಧ್ಯಮಿಕ ವಿದ್ಯಾಭ್ಯಾಸವನ್ನು ಮುಗಿಸಿದ ಫಕ್ಕೀರಪ್ಪನವರು ಮುಂದೆ ಉನ್ನತ ಶಿಕ್ಷಣವನ್ನು ಮುಂಬಯಿನ ಸೇಂಟ್ ಝೇವಿಯರ ಕಾಲೇಜಿನಲ್ಲಿ ಬಿ.ಎ., ಎಲ್.ಎಲ್.ಬಿ. ಪದವಿಯನ್ನು ಪಡೆದು, ಬೆಳಗಾವಿಯಲ್ಲಿ ವಕೀಲಿ ವೃತ್ತಿಯನ್ನು ಪ್ರಾರಂಭಿಸಿ, ಮುಂದೆ ಬಿಜಾಪುರಕ್ಕೆ ಪತ್ನಿ ಭಾಗೀರಥಿಯೊಂದಿಗೆ ಆಗಮಿಸಿ ವಕೀಲಿ ವೃತ್ತಿಯನ್ನು ಮಾಡತೊಡಗಿದರು.

ಬಸವಾದಿ ಶಿವಶರಣರ ವಚನ ಸಾಹಿತ್ಯಕ್ಕೆ ಹಳಕಟ್ಟಿಯವರು ಪ್ರಭಾವಿತರಾಗಿದ್ದರು. ಕಲ್ಯಾಣ ಕ್ರಾಂತಿಯ ನಂತರ ಹರಿದು ಹಂಚಿಹೋಗಿದ್ದ ಬಸವಾದಿ ಶಿವಶರಣರ ವಚನ ಸಾಹಿತ್ಯದ ತಾಡೋಲೆ ಹಸ್ತಪ್ರತಿ ಕಟ್ಟುಗಳು ಮಠದ ಗದ್ದುಗೆಗಳ ಮೇಲೆ ಮತ್ತು ಮನೆಗಳ ಜಗಲಿಯ ಮೇಲೆ ಪೂಜಿಸಲ್ಪಡುತ್ತಿರುವ ವಚನಗಳ ಕಟ್ಟುಗಳು ಎಷ್ಟೋ ಹಾಳಾಗಿ, ಗೆದ್ದಲು ಹತ್ತಿ ಅಟ್ಟ-ನಾಗೊಂದಿಗಳಲ್ಲಿ ನಾಶವಾಗುತ್ತಿದ್ದವು. ಇಂತಹವುಗಳಲ್ಲಿಯ ಒಂದು ಕಟ್ಟು ಶರಣ ಶಿವಲಿಂಗಪ್ಪ ಮಂಚಾಲೆಯವರ ಮನೆಯಲ್ಲಿ 'ಪ್ರಭುದೇವರ ವಚನಗಳ' ತಾಳೆಗರಿಗಳನ್ನು ಹಳಕಟ್ಟಿಯವರು ನೋಡಿ ಪ್ರಭಾವಿತರಾದರು.

ಬಸವಾದಿ ಶರಣರ ವಚನ ಸಾಹಿತ್ಯ ಅಧ್ಯಯನ ಸಂಗ್ರಹ, ಶರಣರ ವಚನಗಳ ಮಹತ್ವ ತಿಳಿದು, ಇದನ್ನು ಜನಸಾಮಾನ್ಯರಿಗೆ ಮುಟ್ಟಿಸಲು ತಮ್ಮ ವಕೀಲಿ ವೃತ್ತಿಯ ಜೊತೆಗೆ ವಚನಗಳ ಸಂಗ್ರಹ ಸಂಪಾದನೆ-ಸಂಕಲನಗೊಳಿಸಿ ಪರಿಷ್ಕರಿಸಿ, ಮುದ್ರಣ ಮಾಡಲು 'ಹಿತಚಿಂಕ' ಎಂಬ ಮುದ್ರಣಾಲಯವನ್ನು 1925ರಲ್ಲಿ ಪ್ರಾರಂಭಿಸಿದರು. ಇದರ ಮೂಲಕ 'ಶಿವಾನುಭವ' ಪತ್ರಿಕೆಯನ್ನು ತೆಗೆದು ಜನಸಾಮಾನ್ಯರಿಗೆ ಓದಲು ತಲುಪಿಸಿದರು. 1927ರಲ್ಲಿ 'ನವಕರ್ನಾಟಕ' ವಾರ ಪತ್ರಿಕೆ ಮೂಲಕ ಸಾಮಾಜಿಕ, ರಾಜಕೀಯ, ಔದ್ಯೋಗಿಕ, ಶೈಕ್ಷಣಿಕ ವಿಷಯಗಳನ್ನು ಪ್ರಕಟಿಸುತ್ತಿದ್ದರು.

ಶರಣ ಫ.ಗು. ಹಳಕಟ್ಟಿಯವರು ಬಸವಾದಿ ಶರಣರ ರಾಶಿ ರಾಶಿ ವಚನಗಳನ್ನು ಸಂಗ್ರಹಿಸಿ ಮುದ್ರಿಸತೊಡಗಿದರು. ಇದಕ್ಕಿಂತ ಮುಂಚೆ ಕೇವಲ 50 ವಚನಕಾರರು ಹಾಗೂ ಕೆಲವೇ ವಚನಗಳು ಬೆಳಕು ಕಂಡಿದ್ದವು. ಇವರ ಶ್ರಮದ ಹುಡುಕಾಟದಿಂದ 250 ವಚನಕಾರರು ಮತ್ತು ಅವರ ವಚನಗಳು, ವಚನಾಂಕಿತಗಳು ಬೆಳಕು ಕಂಡವು. ಹಳಕಟ್ಟಿಯವರು ಕುಟುಂಬದಲ್ಲಿ ಬಡತನ ಮತ್ತು ಅನಾರೋಗ್ಯಪೀಡಿತರಾದರೂ ವಚನಗಳ ಮುದ್ರಣ ನಿಲ್ಲಲಿಲ್ಲ. ವಚನಶಾಸ್ತ್ರಸಾರ ಭಾಗ-1 ಹಾಗೂ ಶಿವಶರಣರ ಚರಿತ್ರೆಗಳು, ಶಿವಾನುಭವ ಶಬ್ದಕೋಶ, ಶರಣರ ವಚನ ಸಂಪಾದನೆ, ಶಾಸನ ಸಂಪಾದನೆ, ರಗಳೆ ಸಂಪಾದನೆ, ಕಾವ್ಯ ಸಂಪಾದನೆ, ಗದ್ಯ ಸಂಪಾದನೆ, ಪತ್ರಿಕೆ ಸಂಪಾದನೆ, ಲೇಖನಗಳು, ಲಿಂಗಾಯತ ಧರ್ಮದ ತತ್ವಗಳು, ಐತಿಹಾಸಿಕ ಸಂಗತಿಗಳು, ರಾಜಕೀಯ, ಸಾಮಾಜಿಕ, ಧಾರ್ಮಿಕ ಕ್ಷೇತ್ರಗಳು, ಸಂಘಟನೆ ಮುಂತಾದವುಗಳನ್ನು ಮುದ್ರಣ ಮಾಡಿ ಜನಸಾಮಾನ್ಯರಿಗೆ ಓದಲು ಮುಟ್ಟಿಸಿ, ಬಸವಾದಿ ಶಿವಶರಣರ ವಚನ ಸಾಹಿತ್ಯದ ಪ್ರಸಾರ ಮತ್ತು ಸಂರಕ್ಷಣೆ ಮಾಡಿದ ಕೀರ್ತಿ ಡಾ. ಫ.ಗು. ಹಳಕಟ್ಟಿಯವರಿಗೆ ಸಲ್ಲುತ್ತದೆ.

ಇಂತಹ ಕಾರಣಿಕ ಪುರುಷನ ಬಗ್ಗೆ ಎಷ್ಟು ಹೇಳಿದರೂ ಕಡಿಮೆಯೇ. ಇನ್ನೂ ಹಲವಾರು ಮುಖಗಳು ಹಳಕಟ್ಟಿಯವರಲ್ಲಿ ಅಡಗಿವೆ. ಇಂಥಹ ಮಹಾತ್ಮನಿಗೆ ಹಲವಾರು ಪ್ರಶಸ್ತಿ-ಪುರಸ್ಕಾರಗಳು ದೊರೆತಿವೆ. ಡಾ. ಫ.ಗು. ಹಳಕಟ್ಟಿಯವರು ದಿನಾಂಕ 29-06-1964ರಲ್ಲಿ ಧರ್ಮಗುರು ಬಸವಣ್ಣನವರ ಮಹಾಬಯಲಿನಲ್ಲಿ ಬಯಲಾದರು. ಕರ್ನಾಟಕ ಸರಕಾರ ಇವರ ಜನ್ಮ ದಿನವನ್ನು 'ವಚನ ಸಾಹಿತ್ಯ ಸಂರಕ್ಷಣೆ ದಿನ'ವನ್ನಾಗಿ ಆಚರಿಸಲು ಆದೇಶಿಸಿರುವುದು ಕನ್ನಡಿಗರಿಗೆ ಹಾಗೂ ಬಸವಾಭಿಮಾನಿಗಳಿಗೆ ಸಂತಸವನ್ನುಂಟು ಮಾಡಿದೆ. 2-7-2025ರಂದು ನಡೆಯಲಿರುವ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯಲ್ಲಿ ನಾವು-ನೀವೆಲ್ಲರೂ ಪಾಲ್ಗೊಳ್ಳೋಣ.

-ಪ್ರಕಾಶ ಅಸುಂಡಿ
ಅಧ್ಯಕ್ಷರು, ತಾಲೂಕಾ
ಶ.ಸಾ.ಪ, ಗದಗ.

ಸಾವಿರಾರು ವಿದ್ಯಾರ್ಥಿಗಳನ್ನು ವಿಜ್ಞಾನ ಪ್ರಪಂಚದತ್ತ ಸೆಳೆದ ಶಿಕ್ಷಕ ಎಸ್.ಐ. ದಿಂಡೂರ ನಿವೃತ್ತಿ ಹೊಂದಿದ ನಿಮಿತ್ತ ಲೇಖನ

# ವಿಜ್ಞಾನ ಶಿಕ್ಷಕರ ಕಣ್ಮಣಿ

ವಿಜ್ಞಾನ ಎಂಬುದು ಕೇವಲ ವಿಷಯವಲ್ಲ, ಅದು ಬುದ್ಧಿವಂತಿಕೆಯ ಬೆಳಕನ್ನು ಹಬ್ಬುವ ಒಂದು ದಾರಿ. ಇಂಥಾ ವಿಜ್ಞಾನ ಶಿಕ್ಷಣವನ್ನು ದಶಕಗಳಿಂದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರಿಗೆ ಪರಿಚಯಿಸುತ್ತಾ, ಅವರ ಭವಿಷ್ಯವನ್ನು ಬೆಳಗಿಸುತ್ತಾ ಬಂದ ಹಿರಿಯ ವಿಜ್ಞಾನ ಶಿಕ್ಷಕರ ನಿವೃತ್ತಿ, ಜಿಲ್ಲೆಯ ಎಲ್ಲರಿಗೂ ಭಾವನಾತ್ಮಕ ಕ್ಷಣವಾಗಿದೆ.

ಎಸ್.ಐ. ದಿಂಡೂರ ಅವರು ಕಳೆದ 35 ವರ್ಷಗಳಿಂದ ವಿಜ್ಞಾನ ವಿಷಯವನ್ನು ಅತ್ಯಂತ ಮನೋಯೋಗದಿಂದ, ಪ್ರಾಮಾಣಿಕತೆ ಹಾಗೂ ನಿಷ್ಠೆಯಿಂದ ಬೋಧಿಸುತ್ತಿದ್ದಾರೆ. ಅವರಿಗೆ ಬೋಧನೆ ಎಂದರೆ ವೃತ್ತಿಯಷ್ಟೇ ಅಲ್ಲ, ತಾವು ಆರಿಸಿಕೊಂಡ ಬದುಕಿನ ಧ್ಯೇಯವೂ ಹೌದು. ಅವರ ಸ್ಪಷ್ಟವಾದ ಬೋಧನಾ ಶೈಲಿ, ಪ್ರಾಯೋಗಿಕ ಅನುಭವದ ಮಹತ್ವ, ಹಾಗೂ ನವೋತ್ಪಾದಕ ಆಲೋಚನೆಗಳ ಬೆನ್ನಲ್ಲೇ ಸಾವಿರಾರು ವಿದ್ಯಾರ್ಥಿಗಳಿಗೆ ವಿಜ್ಞಾನ ಪ್ರಪಂಚದತ್ತ ಸೆಳೆಯಲ್ಪಟ್ಟಿದ್ದಾರೆ.

ಅವರ ಬೋಧನೆಗೆ ಪಾಠಪುಸ್ತಕವೇ ಅಷ್ಟೊಂದು ಮುಖ್ಯವಲ್ಲ. ವಿದ್ಯಾರ್ಥಿಗಳಲ್ಲಿನ ಕುತೂಹಲ, ಪ್ರಶ್ನೆಗಳಿಗೆ ಪ್ರೋತ್ಸಾಹ, ಪ್ರಾಯೋಗಿಕ ಪಾಠಗಳು ಮತ್ತು ಜೀವನಮೌಲ್ಯಗಳೊಂದಿಗೆ ಸಂಗತಿಯಾಗಿರುವ ಪಾಠವಿಧಾನವೇ ಅವರ ಶಕ್ತಿಯಾಗಿತ್ತು. ಅವರ ಮಾರ್ಗದರ್ಶನದಲ್ಲಿ ಅನೇಕ ವಿದ್ಯಾರ್ಥಿಗಳು ಜಿಲ್ಲಾ, ರಾಜ್ಯ ಮಟ್ಟದ ವಿಜ್ಞಾನ ಮೇಳ ಹಾಗೂ ವಿಜ್ಞಾನ ವಸ್ತು ಪ್ರದರ್ಶನ, ವಿಜ್ಞಾನ ಗೋಷ್ಠಿಗಳಲ್ಲಿ ಪ್ರಶಸ್ತಿಗಳನ್ನು ಗಿಟ್ಟಿಸಿದ್ದಾರೆ.

ನಾವು ಈಗ ಅವರ ನಿವೃತ್ತಿಯನ್ನು ಸ್ಮರಿಸುತ್ತಿರುವಾಗ, ಇದು ಕೇವಲ ವಿದಾಯವಲ್ಲ, ಅವರ ಸೇವೆಗಳ ಮೇಲಿರುವ ನಮ್ಮ ಗೌರವದ ಸಂಕೇತವಾಗಿದೆ.



ಅವರು ಬೋಧನೆಯನ್ನು ನಿಲ್ಲಿಸುತ್ತಿದ್ದರೂ, ಅವರ ಪ್ರಭಾವವು ಇನ್ನೂ ಅನೇಕ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಜೀವಂತವಾಗಿರುತ್ತದೆ.

ವಿಜ್ಞಾನ ಸಂಪನ್ಮೂಲ ವ್ಯಕ್ತಿಯಾಗಿ ಮಾಡಿದ ಕಾರ್ಯ ಒಂದು ಅನನ್ಯ ಅನುಭವ. ವಿಜ್ಞಾನ ಶಿಕ್ಷಕನಾಗಿ ಇವರು ವಿದ್ಯಾರ್ಥಿಗಳಲ್ಲಿ ವಿಜ್ಞಾನ ಪ್ರೀತಿಯನ್ನು ಬೆಳೆಸುವ ಸಂಕಲ್ಪದಿಂದ ಶ್ರಮಿಸಿದ್ದಾರೆ. ಆದರೆ ವಿಜ್ಞಾನ ಸಂಪನ್ಮೂಲ ವ್ಯಕ್ತಿಯಾಗಿ ಇವರ ಪಾತ್ರ ಇನ್ನಷ್ಟು ವಿಶಾಲವಾಗಿದೆ. ಈ ಜವಾಬ್ದಾರಿಯಿಂದ ಅವರು ಕೇವಲ ಕಲಿಕೆಯಲ್ಲಿ ಅಲ್ಲ, ಶಾಲಾ ಮಟ್ಟದ ಅಭ್ಯಾಸಗಳು, ಕಾರ್ಯಾಗಾರಗಳು, ತರಬೇತಿಗಳು, ವಿಜ್ಞಾನ ಶಿಬಿರಗಳು, ಹಾಗೂ ಶಿಕ್ಷಕರ ಹಕ್ಕುಬದ್ಧತೆಗಾಗಿ ಸಹ ಕೆಲಸ ಮಾಡುವ ಅವಕಾಶವನ್ನು ಹೊಂದಿದ್ದವರು. ಜಿಲ್ಲಾ ಮಟ್ಟದ ವಿಜ್ಞಾನ ಪ್ರದರ್ಶನ, ತರಬೇತಿ ಕಾರ್ಯಕ್ರಮಗಳಲ್ಲಿ ಅವರ ಉತ್ಸಾಹ ಹಾಗೂ ಸೇವೆಯನ್ನು ಗುರುತಿಸಿ ಹಲವಾರು ಶಾಲೆಗಳು ಮತ್ತು ಶಿಕ್ಷಕರು ಇವರ ಮಾರ್ಗದರ್ಶನವನ್ನು ಕೋರಿದ್ದಾರೆ.

ಎಲ್ಲ ಶಿಕ್ಷಕರ ಕಣ್ಮಣಿಯಾದ ಶ್ರೀಯುತರು ಜಿಲ್ಲೆಯ ಗುಣಾತ್ಮಕ ಫಲಿತಾಂಶಕ್ಕಾಗಿ ಶಾಲೆ, ತಾಲೂಕು ಹಾಗೂ ಜಿಲ್ಲೆಗೆ ತಮ್ಮನ್ನೇ ತಾವು ಅರ್ಪಿಸಿಕೊಂಡು ಮಾಡಿದ ಕಾರ್ಯ ಶ್ಲಾಘನೀಯ, ಎಸ್.ಐ. ದಿಂಡೂರರು ಪಠ್ಯಪುಸ್ತಕ ಪರಿಷ್ಕರಣ ಸಮಿತಿಯಲ್ಲಿ ಕೆಲಸ ಮಾಡಿದ ಅನುಭವ, ರಾಜ್ಯಮಟ್ಟದ ಪ್ರಶ್ನೆ ಪತ್ರಿಕೆ ತಯಾರಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಂಡ ರೀತಿ ನಮ್ಮೆಲ್ಲರಿಗೂ ಅನುಕರಣೀಯ. ಇಲಾಖೆ ಅಧಿಕಾರಿಗಳ ಅಚ್ಚುಮೆಚ್ಚಿನ ಶಿಕ್ಷಕರಾದ ಶ್ರೀಯುತರು ನಮಗೆಲ್ಲರಿಗೂ ಹೆಮ್ಮೆ.

ನಾವೆಲ್ಲರೂ ಅವರ ಸೇವೆಗೆ ಧನ್ಯವಾದ ಸಲ್ಲಿಸುತ್ತೇವೆ ಮತ್ತು ಮುಂದಿನ ಜೀವನದಲ್ಲಿ ಉತ್ತಮ ಆರೋಗ್ಯ, ಸಂತೋಷ ಮತ್ತು ಶಾಂತಿಪೂರ್ಣ ಬದುಕು ನಿಮ್ಮದಾಗಲಿ ಎಂದು ಆ ಭಗವಂತನಲ್ಲಿ ಪ್ರಾರ್ಥಿಸುವದರ ಜೊತೆಗೆ ತಮ್ಮ ಮಾರ್ಗದರ್ಶನ ಯಾವತ್ತು ಜಿಲ್ಲೆಯ ಕಿರಿಯ ವಿಜ್ಞಾನ ಶಿಕ್ಷಕರಾದ ನಮ್ಮೆಲ್ಲರಿಗೂ ಇರಲಿ ಎಂದು ಆಶಿಸುತ್ತೇವೆ.

– ಎಂ.ಹೆಚ್. ಸವದತ್ತಿ.
ಗದಗ.

# ರಾಜ್ಯ ಮಟ್ಟದ ಚೆಸ್ ಪಂದ್ಯಾವಳಿ ಯಶಸ್ವಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ 14 ಮತ್ತು 17 ವರ್ಷದೊಳಗಿನ ಬಾಲಕ, ಬಾಲಕಿಯರಿಗಾಗಿ ಹಾಗೂ ಹಿರಿಯರಿಗಾಗಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಮುಕ್ತ ಚೆಸ್ ಪಂದ್ಯಾವಳಿಯಲ್ಲಿ ಪಾಲ್ಗೊಂಡಿದ್ದ ನೂರಾರು ಚೆಸ್ ಪಟುಗಳು ಉತ್ತಮ ಸ್ಪರ್ಧೆ ನೀಡಿ ಪ್ರಶಸ್ತಿ, ನಗದು ಬಹುಮಾನ ಪಡೆದುಕೊಂಡಿದ್ದಾರೆ.

**14 ವರ್ಷದೊಳಗಿನ ಬಾಲಕರ ವಿಭಾಗದಲ್ಲಿ:** ಗುಬಬರ್ಗಾದ ಅನೀಶ ಸಿ.ಮೋರೆ (ಪ್ರಥಮ), ಗದಗನ ದಿಂಗಾಲೇಶ ಚಂಗಳಿ (ದ್ವಿತೀಯ), ಧಾರವಾಡದ ಉಸ್ಮಾನಖಾನ (ತೃತೀಯ).

**14 ವರ್ಷದೊಳಗಿನ ಬಾಲಕಿಯರ ವಿಭಾಗ:** ಗದಗನ ಸುಭಿಕ್ಷಾ ಚಂಗಳಿ (ಪ್ರಥಮ), ಕಲಬುರ್ಗಿಯ ಲೇಸ್ಸಿ ವಲ್ಲಮಶೆಟ್ಟಿ (ದ್ವಿತೀಯ), ಶಿರಹಟ್ಟಿಯ ಸಹನಾ ಎಂ (ತೃತೀಯ).

**17 ವರ್ಷದೊಳಗಿನ ಬಾಲಕರ ವಿಭಾಗ:** ಗದಗನ ನಂದಕುಮಾರ ಸುಳಿಗೇರಿ (ಪ್ರಥಮ), ಕಲಬುರ್ಗಿಯ ಸಯಾನ ಪರಮಾರ (ದ್ವಿತೀಯ), ಹುಬ್ಬಳ್ಳಿಯ ವಿರಾಜ ಕಟ್ಟಿಮನಿ (ತೃತೀಯ).

**17 ವರ್ಷದೊಳಗಿನ ಬಾಲಕಿಯ ವಿಭಾಗ:** ಧಾರವಾಡದ ಶ್ರಾವಣಿ ನಾಯಕ (ಪ್ರಥಮ), ಗದಗನ ಸಿಂಚನಾ ಕಟ್ಟೆಣ್ಣವರ (ದ್ವಿತೀಯ), ಧಾರವಾಡದ ಅದ್ವಿಕಾ ಶೆಟ್ಟಿ (ತೃತೀಯ).

**ಪುರುಷರ ಮುಕ್ತ ವಿಭಾಗ:** ಗದಗನ ಪ್ರಹ್ಲಾದ ಮಾಂಡ್ರೆ (ಪ್ರಥಮ), ಧಾರವಾಡ ಶ್ರೀಪಾದ ಕೆ.ವಿ (ದ್ವಿತೀಯ), ಹುಬ್ಬಳ್ಳಿಯ ನಾಗರಾಜ ಕುಲಕರ್ಣಿ (ತೃತೀಯ).

ಮಹಿಳೆಯರ ಮುಕ್ತ ವಿಭಾಗ: ಹುಬ್ಬಳ್ಳಿಯ ಲೇಸ್ಸಿ ಶೆಟ್ಟಿ (ಪ್ರಥಮ), ಬಳ್ಳಾರಿಯ ಸುಜಾತ ವೈ(ದ್ವಿತೀಯ), ಶಿರಸಿಯ ಪ್ರೀತಿ ಶೆಟ್ಟಿ (ತೃತೀಯ).

**ಅತ್ಯಂತ ಹಿರಿಯರ ವಿಭಾಗ:** ಶಿರಸಿಯ ರಾಮಚಂದ್ರ ಭಟ್ ಮತ್ತು ಕಿರಿಯರ ವಿಭಾಗದಲ್ಲಿ ಧಾರವಾಡದ ಅನ್ವಿತ ದೇವಿಹೊಸೂರ ಟ್ರೋಫಿ ಮತ್ತು ನಗದು ಬಹುಮಾನ ಪಡೆದುಕೊಂಡರು. ಪಟ್ಟಣದ ತಟ್ಟಿ ವಿಕಲಚೇತನ ಶಾಲೆಯ 5 ವಿದ್ಯಾರ್ಥಿಗಳು ಚೆಸ್ ಸ್ಪರ್ಧೆಯಲ್ಲಿ ಸೆಣಸಾಟ ನಡೆಸಿ ಗಮನ ಸೆಳೆದರು.

ಧಾರವಾಡ ಜಿಲ್ಲಾ ಚೆಸ್ ಅಸೋಸಿಯೇಷನ್ ಅಧ್ಯಕ್ಷ ವಿಶ್ವನಾಥ ಬಳಿಗಾರ ಉದ್ಘಾಟಿಸಿದರು. ಪಟ್ಟಣದ ಎಂ.ಕೆ. ಕಳ್ಳಿಮಠ ಪ್ರಶಸ್ತಿ ವಿತರಿಸಿದರು. ಅಧ್ಯಕ್ಷ ಗಿರೀಶ ಅಗಡಿ, ಗೌರವಾಧ್ಯಕ್ಷ ರಾಮರಾವ್ ವೇರ್ಣೆಕರ, ಎಂ.ಕೆ. ಕಳ್ಳಿಮಠ ಇದ್ದರು.

ಕಲಘಟಗಿಯ ಗೊಬ್ಬರ ಅಂಗಡಿ, ದಾಸ್ತಾನು ಮಳಿಗೆಗಳಿಗೆ ಜಿಲ್ಲಾಧಿಕಾರಿ ದಿಢೀರ್ ಭೇಟಿ

# ಕೃತಕ ಅಭಾವ ಸೃಷ್ಟಿಸಿದರೆ ಕ್ರಿಮಿನಲ್ ಕೇಸ್



ಪ್ರತಿ ರಸಗೊಬ್ಬರ ಮಾರಾಟ ಅಂಗಡಿ ಮುಂದೆ ಅವರಲ್ಲಿ ಲಭ್ಯವಿರುವ ರಸಗೊಬ್ಬರಗಳು, ಅವುಗಳ ದರ, ಮಾರಾಟವಾದ ಚೀಲಗಳು, ದಾಸ್ತಾನು ವಿವರಗಳನ್ನು ಸಾರ್ವಜನಿಕರಿಗೆ ಕಾಣುವಂತೆ ದಪ್ಪ ಅಕ್ಷರಗಳಲ್ಲಿ ಕಡ್ಡಾಯವಾಗಿ ಪ್ರಕಟಿಸಬೇಕು. ಇದರಿಂದ ರೈತರಿಗೆ ಅಗತ್ಯ ಮಾಹಿತಿ ಲಭಿಸಿ, ಅನಗತ್ಯ ಸಮಯ ಹಾಳು ತಪ್ಪುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೇಡಿಕೆಗಿಂತ ಹೆಚ್ಚು ರಾಸಾಯನಿಕ ಗೊಬ್ಬರ ವಿತರಿಸಿದರೂ ಕಲಘಟಗಿ ತಾಲೂಕಿನಲ್ಲಿ ಅನಗತ್ಯ ಗೊಂದಲಗಳು, ರೈತರಿಗೆ ತೊಂದರೆಗಳು ಉಂಟಾಗುತ್ತಿವೆ. ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದಾಗ ವಿತರಕರು ಸರಕಾರದ ನಿಯಮ, ಷರತ್ತು ಪಾಲಿಸದೆ ಇರುವುದು ಮತ್ತು ಸಂಬಂಧಿಸಿದ ಅಧಿಕಾರಿಗಳು ಕ್ರಮಬದ್ಧವಾಗಿ ಮೇಲುಸ್ತುವಾರಿ ಹಾಗೂ ನಿಗಾವಹಿಸದಿರುವುದು ಕಂಡು ಬಂದಿದೆ. ಅಧಿಕಾರಿಗಳಿಂದ ತನಿಖೆ ಮಾಡಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವದಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸಾರ್ವಜನಿಕ ದೂರು ಮತ್ತು ಮಾಧ್ಯಮಗಳ ವರದಿ ಹಿನ್ನೆಲೆಯಲ್ಲಿ ಬೀಜ, ರಸಗೊಬ್ಬರದ ಸಮಸ್ಯೆಗಳನ್ನು ತಿಳಿದು, ಪರಿಹರಿಸುವ ಉದ್ದೇಶದಿಂದ ಕಲಘಟಗಿ ಪಟ್ಟಣದ ಬೀಜ, ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಸೋಮವಾರ ಮಧ್ಯಾಹ್ನ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು. ಗೊಬ್ಬರ ಖರೀದಿಗೆ ಬಂದಿದ್ದ ರೈತರಿಂದ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಕೆಲವು ರಸಗೊಬ್ಬರ ಮಾರಾಟಗಾರರು ಮತ್ತು ಇತರರು ರೈತರಿಗೆ ರಸಗೊಬ್ಬರ ವಿತರಿಸುವಲ್ಲಿ ಕಾನೂನು, ಸರಕಾರದ ಆದೇಶ ಮೀರಿ ವರ್ತಿಸುತ್ತಿರುವುದು ಮತ್ತು ರೈತರನ್ನು ವಂಚಿಸುತ್ತಿರುವುದು ಕಂಡು ಬರುತ್ತಿದೆ. ನಿಯಮಾನುಸಾರ ರೈತರಿಗೆ ರಸಗೊಬ್ಬರ, ಬಿತ್ತನೆ ಬೀಜ, ಕಳನಾಶಕ ವಿತರಿಸುವುದನ್ನು ಪರಿಶೀಲಿಸಲು, ನಿರಂತರ ನಿಗಾವಹಿಸಲು ಮತ್ತು ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಾಗುವಂತೆ ಪ್ರತಿ ತಾಲೂಕಿಗೆ ಆಯಾ ತಹಸೀಲ್ದಾರರ ನೇತೃತ್ವದಲ್ಲಿ ಟಾಸ್ಕ್ ಫೋರ್ಸ್ ರಚಿಸಲಾಗುತ್ತದೆ ಎಂದರು. ಬೇಡಿಕೆಗಿಂತ ಹೆಚ್ಚು ಯೂರಿಯಾ ಸೇರಿ ವಿವಿಧ ರಸಗೊಬ್ಬರಗಳನ್ನು ರೈತರ ಬೇಡಿಕೆ ಮೇರೆಗೆ ಕಲಘಟಗಿ ತಾಲೂಕಿಗೆ ಕೃಷಿ ಇಲಾಖೆ ಪೂರೈಸಿದೆ. ಆದರೂ ರೈತರು ಪ್ರತಿ ದಿನ ಗೊಬ್ಬರ ಖರೀದಿಗೆ ಅಂಗಡಿಗಳ ಮುಂದೆ ಸಾಲು ನಿಲ್ಲುತ್ತಿದ್ದಾರೆ. ಗೊಬ್ಬರ ಸಿಗುತ್ತಿಲ್ಲ ಎಂದು ದೂರುತ್ತಿದ್ದಾರೆ. ಈ ಕುರಿತು ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ತನಿಖೆ ಮಾಡಿಸಿ, ವಿವರ ಪಡೆದುಕೊಳ್ಳುತ್ತೇನೆ. ಗೊಬ್ಬರದ ಕಳ್ಳ ಮಾರಾಟ, ಅನರ್ಹರಿಗೆ ಮತ್ತು ಕೃಷಿಕರಲ್ಲದವರಿಗೆ ಗೊಬ್ಬರ ಪೂರೈಸಿದ್ದು ಅಥವಾ ಅಕ್ರಮ ದಾಸ್ತಾನು ಮಾಡಿ, ರಸಗೊಬ್ಬರದ ಕೃತಕ ಅಭಾವ ಸೃಷ್ಟಿಸಿದ್ದರೆ, ಅಂತವರ ವಿರುದ್ಧ ಎಫ್.ಐ.ಆರ್ ದಾಖಲಿಸಿ, ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳುತ್ತೇನೆ ಮತ್ತು ಮಾರಾಟದ ಲೈಸನ್ಸ್ ರದ್ದು ಮಾಡಿ ಅಂಗಡಿ ಸೀಲ್ ಮಾಡುತ್ತೇನೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಕಲಘಟಗಿ ತಹಸೀಲ್ದಾರ ಬಸವರಾಜ ಬೆಣ್ಣೆಶಿರೂರು, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಪ್ರಭಾರಿ ಕೃಷಿ ಸಹಾಯಕ ನಿರ್ದೇಶಕ ಚನ್ನಪ್ಪ ಅಂಗಡಿ ಸೇರಿದಂತೆ ಇತರ ಅಧಿಕಾರಿಗಳು, ರೈತ ಮುಖಂಡರು, ಸಾರ್ವಜನಿಕರು ಇದ್ದರು.

ಬಂಜಾರ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಉದ್ಘಾಟನೆ, ಪದಾಧಿಕಾರಿಗಳ ಪದಗ್ರಹಣ ಸಮಾರಂಭ

# ಬಂಜಾರರ ಶ್ರೀಮಂತ ಸಂಸ್ಕೃತಿ ಮಾದರಿಯಾಗಿದೆ




ಅಧ್ಯಕ್ಷತೆ ವಹಿಸಿದ್ದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ನಮ್ಮ ಬಂಜಾರ ಸಮಾಜದ ಸಾಹಿತ್ಯ, ಕಲೆ ಹಾಗೂ ಸಂಸ್ಕೃತಿ ಅಮೂಲ್ಯವಾದದ್ದು. ಅಖಂಡ ಭಾರತದಲ್ಲಿ ಒಂದೇ ಭಾಷೆ-ಸಂಸ್ಕೃತಿಯೊಂದಿಗೆ ವೈಶಿಷ್ಟತೆಯನ್ನು ಹೊಂದಿದೆ. ಸಮಾಜದಲ್ಲಿ ಅನೇಕ ಸಾಧಕ ಮಹನೀಯರಿದ್ದಾರೆ ಎನ್ನುವುದು ಹೆಮ್ಮೆಯ ಸಂಗತಿ. ಸಮಾಜದ ಇಂಥಹ ವಿಶೇಷ ಕಾರ್ಯಕ್ರಮಗಳಿಗೆ ಸದಾ ಸಹಕಾರ ನೀಡುವುದಾಗಿ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬಂಜಾರ ಸಮುದಾಯವು ಅತ್ಯಂತ ಹಿಂದುಳಿದಿದ್ದು, ಶ್ರಮಜೀವಿಗಳ ಸಮಾಜವಾಗಿದೆ. ಬಂಜಾರ ಸಮುದಾಯದ ಶ್ರೀಮಂತ ಸಾಹಿತ್ಯ, ಕಲೆ ಮತ್ತು ಸಂಸ್ಕೃತಿ ಮಾದರಿಯದಾಗಿದ್ದು, ಈ ಕುರಿತು ದಾಖಲೀಕರಣವಾಗಬೇಕು ಹಾಗೂ ಈ ಸಮಾಜದಲ್ಲಿನ ಸಾಧಕರನ್ನು ಗುರುತಿಸಿ ಗೌರವಿಸುವ ಕೆಲಸವಾಗಬೇಕು ಎಂದು ವಿಧಾನ ಪರಿಷತ್ ಸದಸ್ಯರಾದ ಪ್ರೊ. ಎಸ್.ವ್ಹಿ. ಸಂಕನೂರ ಹೇಳಿದರು.

ಅವರು ಭಾನುವಾರ ನಗರದ ಕಳಸಾಪೂರ ರಸ್ತೆಯ ಶ್ರೀರಾಮ ಬಂಜಾರ ಭವನದಲ್ಲಿ ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ ಗದಗ ಜಿಲ್ಲಾ ಘಟಕದ ಉದ್ಘಾಟನೆ ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಬಂಜಾರ ಸಾಹಿತ್ಯ ರಾಜ್ಯ ಗೌರವಾಧ್ಯಕ್ಷ ಡಾ. ಪಿ.ಕೆ. ಖಂಡೋಬಾ ಮಾತನಾಡಿ, ನಾವೆಲ್ಲ ಸಮಾಜ ಬಾಂಧವರು ಒಂದಾಗಬೇಕು. ಈ ಸಾಹಿತ್ಯ ಪರಿಷತ್ತಿನ ಪ್ರತಿಯೊಂದು ಕಾರ್ಯಕ್ರಮಗಳು ದಾಖಲೀಕರಣವಾಗಬೇಕು. ನಮ್ಮವರನ್ನು ನಾವು ಗುರುತಿಸಿ ಗೌರವಿಸಬೇಕು. ಸಮಾಜದಲ್ಲಿರುವ ಇನ್ನೊಬ್ಬರನ್ನು ಬೆಳೆಸುವ ಮನೋಭಾವ ಹೊಂದಬೇಕು ಎಂದರು. ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ ಅಧ್ಯಕ್ಷ ಶ್ರೀಕಾಂತ ಜಾಧವ ಹಾಗೂ ಖಂಡೂ ಬಂಜಾರ ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಪದಾಧಿಕಾರಿಗಳಿಗೆ ಪದಗ್ರಹಣ ನೆರವೇರಿಸಿದರು.

ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ ಅಧ್ಯಕ್ಷ ಶ್ರೀಕಾಂತ ಜಾಧವ, ಗದಗ ಜಿಲ್ಲಾ ಬಂಜಾರ ಅಭಿವೃದ್ಧಿ ವೇದಿಕೆ ಅಧ್ಯಕ್ಷ ಡಾ. ಭೀಮಸಿಂಗ್ ರಾಠೋಡ, ಕಾರ್ಯದರ್ಶಿ ಸೋಮು ಲಮಾಣಿ, ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ. ಲಮಾಣಿ, ಹಿರಿಯ ಕರ್ನಾಟಕ ಸುವರ್ಣ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸುರೇಶ ಟಿ. ರಾಠೋಡ ಮಾತನಾಡಿದರು.

ಡಾ. ಬಿ.ಎಲ್. ಚವ್ಹಾಣ ಮಾತನಾಡಿದರು. ವೇದಿಕೆ ಮೇಲೆ ಉಪಾಧ್ಯಕ್ಷ ಮಂಜಪ್ಪ ಎಲ್., ಡಿ.ಎಲ್. ನಾಯಕ, ಡಾ. ಎಲ್.ಪಿ. ನಾಯ್ಕ ಕಠಾರಿ, ಎಸ್.ವಾಯ್. ಲಮಾಣಿ, ಕುಮಾರ ಎಲ್. ಪೂಜಾರ, ಪಾಂಡಪ್ಪ ರಾಠೋಡ, ಜಾನು ಲಮಾಣಿ, ಥಾವು ಜಾಧವ ಮುಂತಾದವರು ಉಪಸ್ಥಿತರಿದ್ದರು. ಸಾವಿತ್ರಿ ಲಮಾಣಿ ಪ್ರಾರ್ಥಿಸಿದರು. ಡಾ. ಕೃಷ್ಣಾ ಕಾರಬಾರಿ ಸ್ವಾಗತಿಸಿದರು. ಡಿ.ಎಸ್. ನಾಕಯ ನಿರೂಪಿಸಿದರು. ಡಾ. ಎಂ.ಆರ್. ನಾಯಕ ವಂದಿಸಿದರು.

ಬಂಜಾರ ಗಾಯಕ ರಮೇಶ ಲಮಾಣಿ ಹಾಗೂ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಸದಸ್ಯರಾದ ಸಾವಿತ್ರಿ ಲಮಾಣಿ ಅವರ ಸಂಗೀತ ಕಾರ್ಯಕ್ರಮ ಜನಮನ ರಂಜಿಸಿತು.

# ನಿರೀಕ್ಷಿತ ಫಲಿತಾಂಶ ಸಿಗದಿರಲು ನಾವೇ ಕಾರಣ

▶▶ ಮೊದಲನೇ ಪುಟದಿಂದ

ತರಲು ಪ್ರಯತ್ನಿಸಿ ಎಂದು ತಿಳಿಸಿದರು.

ಜಿಲ್ಲೆಗೆ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸಚಿವ ಸಂತೋಷ ಲಾಡ್ ತಮ್ಮ ಸಂತೋಷ ಲಾಡ್ ಫೌಂಡೇಶನ್ ವತಿಯಿಂದ ತಲಾ 10 ಸಾವಿರ ರೂ ಪ್ರೋತ್ಸಾಹಧನ ನೀಡಿ, ಗೌರವಿಸಿದರು. ಈ ಸಂದರ್ಭದಲ್ಲಿ ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ವೇದಿಕೆಯಲ್ಲಿದ್ದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪ ಯೋಜನಾ ಸಮನ್ವಯಾಧಿಕಾರಿ ಎಸ್.ಎಂ. ಹುಡೆದಮನಿ ಸ್ವಾಗತಿಸಿದರು. ಸಹಾಯಕ ಯೋಜನಾ ಸಮನ್ವಯಾಧಿಕಾರಿ ರೇಣುಕಾ ಅಮಲಜೇರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಕ್ಷೇತ್ರಶಿಕ್ಷಣಾಧಿಕಾರಿಗಳು, ಪ್ರಾಥಮಿಕ, ಪ್ರೌಢಶಾಲೆಗಳ ಪ್ರಧಾನ ಗುರುಗಳು, ಮುಖ್ಯೋಪಾಧ್ಯಾಯರು, ಎಸ್‌ಡಿಎಂಸಿ ಅಧ್ಯಕ್ಷರು, ಜನಪ್ರತಿನಿಧಿಗಳು ಭಾಗವಹಿಸಿದ್ದರು.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿರುವ 122 ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಈ ಹಿಂದೆ ವಿತರಿಸಲಾದ ಸಿಯುಜಿ ನಂಬರಗಳು ಕಾರ್ಯನಿರ್ವಹಿಸುತ್ತಿಲ್ಲವಾದ್ದರಿಂದ ಆಯಾ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹೊಸ ಸಿಯುಜಿ ನಂಬರಗಳನ್ನು ಪೂರೈ'https://zpgadag.karnataka.gov.in/kn ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೂವಿನಶಿಗ್ಲಿ ವಿರಕ್ತಮಠದ ಗುರುಕುಲದ ದಾಸೋಹ ಸೇವೆಗೆ ವಿಜಯಕುಮಾರ ಬಿರಾದಾರರಿಂದ ದಿನಸಿ ಸಮರ್ಪಣೆ

# ದಾನಿಗಳಿಗೆ ಪುಣ್ಯದ ಫಲ ಪ್ರಾಪ್ತವಾಗುತ್ತದೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅನ್ನ, ಅಕ್ಷರ, ಆಶ್ರಯ ತ್ರಿವಿಧ ದಾಸೋಹ ಸೇವೆ ಮಾಡುತ್ತಿರುವ ಮಠಮಾನ್ಯಗಳಿಗೆ ಭಕ್ತರೇ ಆಧಾರ ಸ್ತಂಭ. ಶತಮಾನಗಳಿಂದಲೂ ಮಠಮಾನ್ಯಗಳು, ಗುರುಕುಲಗಳು ನಡೆಸುತ್ತಿರುವ ಸೇವೆ ತನು-ಮನ-ಧನದಿ ಕೈ ಜೋಡಿಸುತ್ತಿರುವ ದಾನಿಗಳಿಗೆ ಪುಣ್ಯದ ಫಲ ಪ್ರಾಪ್ತವಾಗುತ್ತದೆ ಎಂದು ಹೂವಿನ ಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಭಾನುವಾರ ಹೂವಿನಶಿಗ್ಲಿ ಮಠದ ಗುರುಕುಲದಲ್ಲಿನ ನೂರಾರು ಅನಾಥ, ಬಡಮಕ್ಕಳ ದಾಸೋಹ ಸೇವೆಗೆ ಹಲವು ವರ್ಷದಿಂದ 6 ತಿಂಗಳಿಗೊಮ್ಮೆ ಲಕ್ಷಾಂತರ ರೂಗಳ ದಾಸೋಹ ಸೇವೆ ನೀಡುವ ಕಲಬುರ್ಗಿ ತಾಲೂಕಿನ ಸೋನಾಳ ಗ್ರಾಮದ ವಿಜಯಕುಮಾರ ಸೂರ್ಯಕಾಂತ ಬಿರಾದಾರ ಅವರಿಂದ ದಿನಸಿ ಸ್ವೀಕರಿಸಿದ ಗ್ರಾಮಸ್ಥರು ಮತ್ತು ಗುರುಕುಲ ಮಕ್ಕಳಿಂದ ಹಮ್ಮಿಕೊಳ್ಳಲಾಗಿದ್ದ ಸತ್ಕಾರ ನೆರವೇರಿಸಿ ಮಾತನಾಡುತ್ತಿದ್ದರು. ಪ್ರಸ್ತುತ ದಿನಮಾನಗಳಲ್ಲಿ ಎಲ್ಲ ವಸ್ತುಗಳ ಬೆಲೆ ಗಗನಕ್ಕೇರುತ್ತಿದೆ. ಈ ಸಂದರ್ಭದಲ್ಲಿ ಸರ್ಕಾರದ ಸೌಲಭ್ಯವಿಲ್ಲದ ಮಠದ ಗುರುಕುಲದಲ್ಲಿನ 300ಕ್ಕೂ ಹೆಚ್ಚು ಮಕ್ಕಳಿಗೆ ಗ್ರಾಮಸ್ಥರ, ಭಕ್ತರ ಸಹಾಯ-ಸಹಕಾರವಿದ್ದರೂ ನಿತ್ಯ ತ್ರಿವಿಧ ದಾಸೋಹ ಸೇವೆ ಅತ್ಯಂತ ಕಷ್ಟವಾಗಿದೆ. ಹರ ಮುನಿದರೂ ಗುರು ಕಾಯುವರು ಎಂಬಂತೆ ಲಿಂ.ನಿರಂಜನ ಜಗದ್ಗುರುಗಳ ಆಶೀರ್ವಾದಿಂದ ವಿಜಯಕುಮಾರ ಅವರಂತಹ ಪರಮ ಶ್ರೇಷ್ಠ ಭಕ್ತರು, ದಾನಿಗಳಿಂದ ಈ ಮಕ್ಕಳ ಸೇವೆ ಮಾಡಲು ಸಾಧ್ಯವಾಗುತ್ತಿದೆ. ವಿಜಯಕುಮಾರ ಕಲಬುರ್ಗಿ ತಾಲೂಕಿನ ಸೋನಾಳ ಗ್ರಾಮದ ಶ್ರೀಮಠದ ಭಕ್ತರಾಗಿದ್ದು, ಸದ್ಯ ಪುಣೆಯಲ್ಲಿ ಉದ್ಯಮ ನಡೆಸುತ್ತಿದ್ದಾರೆ. ಪ್ರತಿ 6 ತಿಂಗಳಿಗೊಮ್ಮೆ ತಪ್ಪದೇ 8 ಲಕ್ಷ ರೂ ಮೊತ್ತದ ಶ್ರೇಷ್ಠ ಗುಣಮಟ್ಟದ ದಿನಸಿ ಸೇವೆ ಮಾಡುತ್ತಿದ್ದಾರೆ. ಇದರಿಂದ ನೂರಾರು ಅನಾಥ, ಬಡ ಮಕ್ಕಳು ಸಂತೃಪ್ತರಾಗಿದ್ದು ಗುರುಕುಲದ ತ್ರಿವಿಧ ದಾಸೋಹದ ಶ್ರೇಷ್ಠ ಪರಂಪರೆ ಮುಂದುವರೆಯಲೂ ಅನುಕೂಲವಾಗಿದೆ. ಅವರ ಈ ನಿಸ್ವಾರ್ಥ, ಪುಣ್ಯದ ಸೇವೆಗೆ ಶ್ರೀಮಠದ ಆಶೀರ್ವಾದ ಮತ್ತು ಮಕ್ಕಳ ಶುಭ ಹಾರೈಕೆಯಿದ್ದು ಭಗವಂತ ಅವರಿಗೆ ಇನ್ನಷ್ಟು ಶಕ್ತಿ ನೀಡಲಿ ಎಂದು ಹಾರೈಸಿದರು. ಈ ವೇಳೆ ಡಾ. ಚಂದ್ರು ಲಮಾಣಿ ಮಾತನಾಡಿದರು. ಸರೋಜಾ ಬನ್ನೂರ, ಲಲಿತಾ ಮೆಕ್ಕಿ, ವಿಜಯಲಕ್ಷ್ಮೀ ಬಾಳಿಕಾಯಿ, ಶಾರದಾ ಮಹಾಂತಶೆಟ್ಟರ, ಅಶೋಕ ಶಿರಹಟ್ಟಿ, ನೆಹರು ಬಿರಾದಾರ, ಲೋಕೇಶ ಹನಮಶೆಟ್ಟಿ, ಸಂಜುಕುಮಾರ ಪಾಟೀಲ, ಶಿವಕುಮಾರ ಕೌಡಗಾಂವೆ, ಡಾ. ಪರಮೇಶ್ವರ ಬಿರಾದಾರ, ನಾಗಶೆಟ್ಟಿ ಕಾರಮುಂಗೆ, ರಾಜು ಲಾಂಡಗೆ, ರಾಜು ಬಿರಾದಾರ, ನಿಂಗಪ್ಪ ಹೆಬಸೂರ, ಅನ್ನದಾನಯ್ಯ ಹಿರೇಮಠ, ದೇವೇಂದ್ರಪ್ಪ ಸಣ್ಣ ಬಾಳಪ್ಪನವರ, ಆರ್.ಬಿ. ಬಡಿಗೇರ, ಪಿ.ಎಚ್. ಪಾಟೀಲ ಸೇರಿ ಶಿಕ್ಷಕ ವೃಂದ, ಸಿಬ್ಬಂದಿ, ಗುರುಕುಲದ ಮಕ್ಕಳು ಹಾಜರಿದ್ದರು.

ಶ್ರೀಮಠದ ಗೌರವ ಸ್ವೀಕರಿಸಿದ ವಿಜಯಕುಮಾರ ಎಸ್.ಬಿರಾದಾರ ಮಾತನಾಡಿ, ಮಕ್ಕಳ ಸೇವೆ ದೇವರ ಸೇವೆ ಎಂಬುದು ನನ್ನ ಹಿರಿಯರಿಂದ ಕಲಿತಿದ್ದೇನೆ. ಶ್ರೀಮಠವು ಬಡ, ಅನಾಥ ಮಕ್ಕಳಿಗಾಗಿ ಮಾಡುತ್ತಿರುವ ಸೇವೆಗೆ ತಮ್ಮದೊಂದು ಅಳಿಲು ಸೇವೆ. ಈ ಸೇವೆಗೆ ಅವಕಾಶ ಸಿಕ್ಕಿರುವುದು ನನ್ನ ಭಾಗ್ಯ ಮತ್ತು ಸಂತೃಪ್ತಿ ತಂದಿದೆ. ಈ ಸೇವೆಯನ್ನು ಇನ್ನಷ್ಟು ಹೆಚ್ಚಿಸುವ ಶಕ್ತಿ ದೇವರು ನೀಡಲೆಂದು ಧನ್ಯತಾಭಾವದಿಂದ ಪ್ರಾರ್ಥಿಸುವೆ. ಗುರುಕುಲದ ಮಕ್ಕಳು ಉತ್ತಮ ನಾಗರಿಕರಾಗಿ, ನಾಡಿಗೆ ಬೆಳಕಾಗಿ ಶ್ರೀಮಠದ ಕೀರ್ತಿಗೆ ಕಾರಣರಾಗಲಿ ಎಂಬುದು ನನ್ನ ಕೋರಿಕೆ ಎಂದರು.

# ಒತ್ತುವರಿ ಮಾರ್ಗವನ್ನು ತೆರವುಗೊಳಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಒತ್ತುವರಿಯಾಗಿರುವ ಅರಣ್ಯ ಮಾರ್ಗವನ್ನು ತೆರವುಗೊಳಿಸಿ ಕುರಿಗಾಹಿಗಳಿಗೆ ಓಡಾಡಲು ಅನುಕೂಲ ಮಾಡಿಕೊಡಬೇಕೆಂದು ಅಗ್ರಹಿಸಿ ಹಲುವಾಗಲು, ಕಣಿವಿ ಮತ್ತು ಗರ್ಭಗುಡಿ ಗ್ರಾಮದ ಕುರಿಗಾಹಿಗಳು ತಾಲೂಕು ವಲಯ ಅರಣ್ಯಾಧಿಕಾರಿ ರಾಜು ಗೊಂಡ್ಕರ್ ಅವರಿಗೆ ಮನವಿ ಸಲ್ಲಿಸಿದರು.

ಮಳೆಗಾಲದಲ್ಲಿ ಕುರಿಗಳನ್ನು ಮೇಯಿಸಲು ಅರಣ್ಯ ಪ್ರದೇಶಕ್ಕೆ ಹೋಗಲು ಒಂದೇ ದಾರಿಯಿದ್ದು, ಅದನ್ನು ಕೆಲವರು ಒತ್ತುವರಿ ಮಾಡಿಕೊಂಡಿದ್ದಾರೆ. ಇದರಿಂದ ಗುಡ್ಡಕ್ಕೆ ಹೋಗಲು ತೊಂದರೆಯಾಗುತ್ತಿದೆ. ಆದ್ದರಿಂದ, ಒತ್ತುವರಿಯಾಗಿರುವ ಅರಣ್ಯ ಭೂಮಿಯನ್ನು ತೆರವುಗೊಳಿಸಿ ಕುರಿಗಾಹಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ವಲಯ ಅರಣ್ಯಾಧಿಕಾರಿಗಳು, ಅರಣ್ಯ ಭೂಮಿ ಒತ್ತುವರಿಗೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕುರುಬ ಸಮಾಜದ ಮಾಜಿ ಅಧ್ಯಕ್ಷ ವೈ.ಕೆಬಿ. ದುರುಗಪ್ಪ, ಪುರಸಭೆ ನಾಮನಿರ್ದೇಶಿತ ಸದಸ್ಯ ಎಚ್. ವಸಂತಪ್ಪ, ಹಲುವಾಗಲು ಗ್ರಾ.ಪಂ ಮಾಜಿ ಅಧ್ಯಕ್ಷ ಎಂ.ದ್ಯಾಮಪ್ಪ, ಭೂತಪ್ಪರ ಗಂಗಪ್ಪ, ಮೇಡ್ಲೆರಿ ನಿಂಗಪ್ಪ, ಬಿ.ನಾಗರಾಜ, ರುದ್ರಪ್ಪ, ಪರಸಪ್ಪ ಸೇರಿದಂತೆ ಇತರರು ಇದ್ದರು.

# ಬಂಜಾರ ಸಮಾಜದದಿಂದ ಸೀತ್ಲಾ ಹಬ್ಬ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ತಾಂಡಾಗಳಲ್ಲಿ ಮಂಗಳವಾರ ಕ್ಷುದ್ರ ದೇವತೆಗಳನ್ನು ಸಂತೃಪ್ತಿಪಡಿಸುವ ಸೀತ್ಲಾ/ಸಾತಿಯಾಡಿ(ಏಳು ಮಕ್ಕಳ ತಾಯಿ) ದೇವತೆಯ ಹಬ್ಬವನ್ನು ಶೃದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಪ್ರತಿ ವರ್ಷ ಆಷಾಢ ಮಾಸದ ಮೊದಲ ಮಂಗಳವಾರ ಸಂಪ್ರದಾಯದಂತೆ ಬಂಜಾರ ಸಮುದಾಯದವರು ಆಚರಿಸುವ ವಿಶೇಷ ಹಬ್ಬ ಇದಾಗಿದೆ. ತಾಂಡಾದಲ್ಲಿ ಭೂತ, ಪಿಶಾಚಿ, ಮಾಟ, ಮಂತ್ರಗಳಿಗೆ ಅಪಾರವಾಗಿ ಭಯಪಡುವ ಈ ಜನ ತಾಂಡದಲ್ಲಿ ಮಳೆಗಾಲದಲ್ಲಿ ಕಾಣಿಸಿಕೊಳ್ಳುವ ಶೀತ, ಜ್ವರ, ಕಾಲರಾ, ಸಿಡುಬು, ಗಂಟಲುಬೇನೆಯಂತಹ ಅನೇಕ ಸಾಂಕ್ರಾಮಿಕ ರೋಗಳಿಗೆ ಕ್ಷುದ್ರ ದೇವತೆಗಳೇ ಕಾರಣವಾಗಿದ್ದು, ಈ ದೇವತೆಗಳನ್ನು ತೃಪ್ತಿಪಡಿಸಿದರೆ ಇಂತಹ ಕಾಯಿಲೆಗಳು ಬರುವುದಿಲ್ಲವೆಂದು ನಂಬುತ್ತಾರೆ. ಈ ದೇವಗತೆಗಳನ್ನು 'ವಾಳೆವಂಗೋಳಾರ್ ಭವಾನಿ' (ಗಾಳಿ ದೇವತೆ) ಎಂದು ಕರೆಯುತ್ತಾರೆ. ತಾಂಡಾ ಹೊರ ವಲಯದ ಬೇವಿನಮರದ ಬುಡದಲ್ಲಿ ತಮ್ಮ ಕುಲದ ಶಕ್ತಿ ದೇವತೆ ಮರಿಯಮ್ಮ ತಾಯಿಯ ಸಪ್ತ ಅವತಾರಗಳ 7 ಕಲ್ಲುಗಳನ್ನಿಟ್ಟು ಅವುಗಳಿಗೆ ಕೆಮ್ಮಣ್ಣ ಬಣ್ಣ ಲೇಪಿಸಿ, ಕುಂಕುಮಾರ್ಚನೆ ಮಾಡುತ್ತಾರೆ. ಓರ್ವ ಲೂಕಡ್(ಸೇವಕ)ನನ್ನು ಪ್ರತಿಷ್ಠಾಪಿಸಿ ತೆಂಗಿನಕಾಯಿ, ಸಿಹಿ ಭೋಜನದ ಎಡೆ ಮಾಡಿ ಪೂಜೆ ಸಲ್ಲಿಸುತ್ತಾರೆ.

ಈ ವೇಳೆ ತಾವು ಸಾಕಿದ ಜಾನುವಾರುಗಳಿಗೂ ಯಾವುದೇ ರೀತಿಯ ರೋಗ-ರುಜಿನಗಳು ಬಂದು ಪ್ರಾಣ ಹಾನಿಯಾಗದಿರಲೆಂದು, ಉತ್ತಮ ಮಳೆಯಾಗಿ ಸಮೃದ್ಧ ಬೆಳೆ ಬರಲೆಂದು, ಸಂತಾನ ಪ್ರಾಪ್ತಿಗಾಗಿಯೂ ಪ್ರಾರ್ಥಿಸುತ್ತಾರೆ. ಸದಾ ಪ್ರಕೃತಿಮಾತೆಯ ಮಡಿಲಿನಲ್ಲಿ ಬದುಕುವ ಬಂಜಾರರು ವಿವಿಧ ಋತುವಾರು ಮಳೆಯ ಕುರಿತು, ಗುಡುಗು ಸಿಡಿಲು, ಸುಂಟರಗಾಳಿ, ಬಿರುಗಾಳಿ, ಕೆರೆಕಟ್ಟೆಗಳ ಕುರಿತು ತಮ್ಮದೇ ಆದ ರೀತಿಯಲ್ಲಿ ವ್ಯಾಖ್ಯಾನ ಮಾಡಿ ನಿಸರ್ಗದ ಬಗ್ಗೆ ನಿಷ್ಠೆ, ನಂಬಿಕೆ ವಿಶ್ವಾಸಗಳನ್ನಿಟ್ಟು ಹಬ್ಬ ಹರಿದಿನಗಳ ಮೂಲಕ ಆಚರಣಾ ಪದ್ಧತಿಗಳನ್ನು ಪಾಲಿಸುತ್ತಾರೆ ಎಂದು ಕೊಂಡಿಕೊಪ್ಪ ತಾಂಡಾದ ಶೋಭಾ ಲಮಾಣಿ ಹೇಳಿದರು.

# ನಮ್ಮ ಸೇವೆ ಸಾರ್ಥಕವಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪರಿಸರ ರಕ್ಷಣೆ ಕೇವಲ ದಿನಾಚರಣೆಗೆ ಸೀಮಿತವಾಗದೇ ಪ್ರತಿಯೊಬ್ಬರೂ ನಿತ್ಯದ ಕರ್ತವ್ಯವಾಗಿಸಬೇಕು ಎಂದು ಗುಲಗಂಜಿಕೊಪ್ಪದ ಗ್ರಾ.ಪಂ ಮಾಜಿ ಅಧ್ಯಕ್ಷ ನಿಂಗನಗೌಡ ಹೊಸಗೌಡ್ರ ಹೇಳಿದರು.

ದುಂಡಿಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಭಾನುವಾರ ಪಟ್ಟಣದ ಪುರಸಭೆ ಉಮಾ ವಿದ್ಯಾಲಯದ ಪ್ರೌಢಶಾಲೆಯಲ್ಲಿ 1985ರಲ್ಲಿ ಎಸ್‌ಎಸ್‌ಎಲ್‌ಸಿ ಓದಿದ ಮೈತ್ರಿ-85 ಬಳಗದ ಸದಸ್ಯರು ಹಮ್ಮಿಕೊಂಡಿದ್ದ ಪರಿಸರ ದಿನಾಚರಣೆಯಲ್ಲಿ ಸಸಿ ನೆಟ್ಟು ಅವರು ಮಾತನಾಡಿದರು.

ಬಳಗದ ಸದಸ್ಯರಾದ ಆರ್.ಕೆ. ಕಮ್ಮಾರ, ಸುರೇಶ ಚೋಟಗಲ್ ಮಾತನಾಡಿ, 6ವರ್ಷಗಳಿಂದ ಮೈತ್ರಿ ಬಳಗದಿಂದ ಸಸಿ ನೆಟ್ಟು ಬೆಳೆಸುವ ಕಾರ್ಯ ಮಾಡಲಾಗುತ್ತಿದೆ. ಬಾಳೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ಬೆಳೆದ ಗಿಡಗಳು ನಮ್ಮ ಸೇವೆಯನ್ನು ಸಾರ್ಥಕಗೊಳಿಸಿವೆ ಎಂದರು.

ಈ ವೇಳೆ ಬಳಗದ ಅಧ್ಯಕ್ಷ ನಾಗರಾಜ ಹಣಗಿ, ಕಾರ್ಯದರ್ಶಿ ಬಸವರಾಜ ಹೆಬ್ಬಾಳ, ಚಂದ್ರಶೇಖರ ವಡಕಣ್ಣವರ, ಕುಮಾರ ಬಾಳೇಶ್ವರಮಠ, ಉಪಾಸಿ, ಮಾಬಳೇಶ ಮೆಡ್ಲೇರಿ, ಪ್ರಕಾಶ ಕಾಯಕದ, ಈರಣ್ಣ ಯರ್ಲಗಟ್ಟಿ, ಆರ್.ಸಿ. ಪಾಟೀಲ, ಸೋಮನಗೌಡ ಪಾಟೀಲ, ಬಸವರಾಜ ಗುಡಗೇರಿ, ಯಲ್ಲಪ್ಪ ಮಾಚೇನಹಳ್ಳಿ, ಮೌನೇಶ್ವರ ಬಾಲೆಹೊಸೂರ ಇದ್ದರು.

# ಮೂಲ ಉದ್ದೇಶವನ್ನು ಮರೆಯದೇ ಹಬ್ಬ ಆಚರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತ್ಯಾಗ, ಬಲಿದಾನದ ಪ್ರತೀಕವಾದ ಮೊಹರಂ ಹಬ್ಬವನ್ನು ಹಿಂದೂ-ಮುಸ್ಲಿಂ ಬಾಂಧವರು ಪರಸ್ಪರ ಸ್ನೇಹ, ಸೌಹಾರ್ದತೆ, ಶಾಂತಿಯಿಂದ ಆಚರಿಸಬೇಕು ಎಂದು ಸಿಪಿಐ ನಾಗರಾಜ ಮಾಡಳ್ಳಿ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಜು.1ರಿಂದ ಪ್ರಾರಂಭಗೊಳ್ಳಲಿರುವ ಮೊಹರಂ ಹಬ್ಬದ ಪ್ರಯುಕ್ತ ಕರೆದ ಸಾರ್ವಜನಿಕ ಶಾಂತಿ ಸಭೆಯಲ್ಲಿ ಮಾತನಾಡಿ, ಹಬ್ಬಗಳ ಆಚರಣೆಯ ನೆಪದಲ್ಲಿ ಯಾವುದಕ್ಕೂ ಅಪಚಾರವಾಗದಂತೆ ಹಬ್ಬಗಳ ಮೂಲ ಉದ್ದೇಶವನ್ನು ಗಮನದಲ್ಲಿಟ್ಟುಕೊಂಡು ಶಿಸ್ತು, ಸಂಯಮ ಮತ್ತು ಸಾಂಪ್ರದಾಯಿಕವಾಗಿ ಹಬ್ಬಗಳನ್ನು ಆಚರಿಸಬೇಕು. ಧರ್ಮ, ಸಂಸ್ಕೃತಿಯ ಪ್ರತೀಕವಾದ ಹಬ್ಬಗಳ ಆಚರಣೆಯ ನೆಪದಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ಮತ್ತು ಶಾಂತಿ-ಸುವ್ಯವಸ್ಥೆ, ಸೌಹಾರ್ದತೆ ಕದಡುವ ಯಾವುದೇ ಘಟನೆಗಳು ಜರುಗಿದರೆ ತಪ್ಪಿತಸ್ಥರ ಮೇಲೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದರು. ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ ಮಾತನಾಡಿ, ಪಟ್ಟಣ ಸೇರಿ ತಾಲೂಕಿನಲ್ಲಿ ಮೊಹರಂ ಹಬ್ಬವನ್ನು ಎಲ್ಲ ಸಮುದಾಯದವರು ಒಗ್ಗೂಡಿ ಶೃದ್ಧಾ, ಭಕ್ತಿ ವಿಜೃಂಬಣೆಯಿಂದ ಆಚರಣೆ ಮಾಡುತ್ತಾರೆ. ಭಾವೈಕ್ಯತೆಗೆ ಹೆಸರಾದ ಪಟ್ಟಣದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗೆ ಆಸ್ಪದ ನೀಡದೆ ಎಲ್ಲರೂ ಸಹೋದರ ಭಾವನೆಯೊಂದಿಗೆ ಶಾಂತ ರೀತಿಯಲ್ಲಿ ಹಬ್ಬದ ಆಚರಣೆ ಮಾಡೋಣ ಎಂದರು.

ಪಿಎಸ್‌ಐ ನಾಗರಾಜ ಗಡದ ಸ್ವಾಗತಿಸಿ ಮಾತನಾಡಿದರು. ಕ್ರೈಂ ಪಿಎಸ್‌ಐ ಟಿ.ಕೆ. ರಾಠೋಡ, ದಾದಾಪೀರ ಮುಚ್ಚಾಲೆ, ಎಸ್.ಕೆ. ಹವಾಲ್ದಾರ್, ಸುರೇಶ ನಂದೆಣ್ಣವರ, ಎಂ.ಎಂ. ಮುಳಗುಂದ, ಶರಣು ಗೋಡಿ, ಇಸ್ಮಾಯಿಲ್ ಆಡೂರ, ಅಮರೇಶ ಗಾಂಜಿ, ಬಸವರಾಜ ಕಲ್ಲೂರ, ದಾದಾಪೀರ ತಂಬಾಕ, ಕಲಂದರ ಸೂರಣಗಿ, ಕಾರ್ತಿಕ ಹಿರೇಮಠ, ಪಕ್ಕೀರೇಶ ಭಜಕ್ಕನವರ ಸೇರಿ ಹಿಂದೂ-ಮುಸ್ಲಿಂ ಭಾಂದವರಿದ್ದರು. ನಂದೀಶ ಮಠಪತಿ ನಿರ್ವಹಿಸಿದರು.

# ಮುಖ್ಯಮಂತ್ರಿ ಬದಲಾವಣೆ ಹೇಳಿಕೆ: ಆಪ್ತ ಶಾಸಕ ಇಕ್ಬಾಲ್‌ಗೆ ನೋಟಿಸ್ ಕೊಟ್ಟು ವಾರ್ನಿಂಗ್ ಮಾಡಿದ ಡಿಕೆ ಶಿವಕುಮಾರ್!



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಾಧ್ಯಮಗಳ ಮುಂದೆ ಬಹಿರಂಗವಾಗಿ ಸಿಎಂ ಬದಲಾವಣೆ ಕುರಿತು ಹೇಳಿಕೆ ನೀಡಿದ್ದ ರಾಮನಗರ ಶಾಸಕ ಇಕ್ಬಾಲ್ ಹುಸೇನ್‌ಗೆ ನೋಟಿಸ್ ಕೊಟ್ಟು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ.

ಮುಖ್ಯಮಂತ್ರಿಗಳ ಬದಲಾವಣೆ ವಿಷಯದಲ್ಲಿ ಪಕ್ಷದಲ್ಲಿ ಗೊಂದಲ ಹಾಗೂ ಮುಜುಗರ ಉಂಟು ಮಾಡುವಂತಹ ಬಹಿರಂಗವಾಗಿ ಹೇಳಿಕೆಗಳನ್ನು ನೀಡಿರುತ್ತೀರಿ. ತಮ್ಮ ಈ ಬಹಿರಂಗ ಹೇಳಿಕೆಗಳು ಪಕ್ಷಕ್ಕೆ ಮುಜುಗರ ಉಂಟು ಮಾಡುವುದಲ್ಲದೆ, ಪಕ್ಷದ ಶಿಸ್ತು ಉಲ್ಲಂಘನೆ ಆಗಿರುತ್ತದೆ. ತಮ್ಮ ಈ ಅಶಿಸ್ತಿನ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಿ, ಈ ಕಾರಣ ಕೇಳಿ ನೋಟಿಸ್ ನೀಡಲಾಗಿದೆ. ತಾವುಗಳು ಈ ನೋಟಿಸ್ ತಲುಪಿದ ಒಂದು ವಾರದ ಒಳಗಾಗಿ ತಮ್ಮ ಹೇಳಿಕೆಗಳ ಬಗ್ಗೆ ಸಮಜಾಯಿಷಿ ನೀಡಲು ಸೂಚಿಸಲಾಗಿದೆ.

ಇನ್ನೂ ಕರ್ನಾಟಕ ಕಾಂಗ್ರೆಸ್‌ನಲ್ಲಿ ಶಾಸಕರ ಅಸಮಾಧಾನದ ಕಿಚ್ಚು ಕಾವೇರುತ್ತಿದೆ. ಒಬ್ಬೊಬ್ಬರದ್ದು ಒಂದೊಂದು ಕಥೆ, ಮುನಿಸು, ಬೇಸರ. ಹೀಗಾಗಿ ಈ ಕಿಚ್ಚು ಮತ್ತಷ್ಟು ಸ್ಫೋಟಗೊಳ್ಳುವ ಮೊದಲೇ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಶಾಸಕರ ಅಸಮಾಧಾನ ತಣಿಸಲು ಬಂದಿದ್ದಾರೆ.

# ಎಸ್.ಎಸ್.ಕೆ ತರುಣ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ



ಇತ್ತೀಚೆಗೆ ನಡೆದ ಬೆಟಗೇರಿ ಎಸ್.ಎಸ್.ಕೆ ತರುಣ ಸಂಘದ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ 2025-26ನೇ ಸಾಲಿನ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ನಾರಾಯಣಸಾ ಆರ್.ಕಬಾಡಿ, ಉಪಾಧ್ಯಕ್ಷರಾಗಿ ಶ್ಯಾಮ್ ಎನ್.ಮಿಸ್ಕಿನ್, ಗೌರವ ಕಾರ್ಯದರ್ಶಿಗಳಾಗಿ ಸೋಮಶೇಖರ ಆರ್.ಮೇರವಾಡೆ, ಸಹಕಾರ್ಯದರ್ಶಿಯಾಗಿ ಗಣೇಶ ಎಚ್.ಪವಾರ, ಖಜಾಂಚಿಯಾಗಿ ಶ್ರೀರಾಮ ಎಸ್.ಹಬೀಬ, ಲೆಕ್ಕ ತಪಾಸಿಗರಾಗಿ ಶ್ರೀಕಾಂತ ಜೆ.ಕಬಾಡಿ ಹಾಗೂ ವ್ಯಾಯಾಮಶಾಲೆ ಚೇರಮನ್‌ರಾಗಿ ಸತ್ಯನಾರಾಯಣ ಎಫ್.ಮೇರವಾಡೆ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಪಂಚ ಟ್ರಸ್ಟ ಕಮಿಟಿ, ತರುಣ ಸಂಘ, ಮಹಿಳಾ ಮಂಡಳದ ಸದಸ್ಯರು, ಪದಾಧಿಕಾರಿಗಳು ಸೇರಿದಂತೆ ಸಮಾಜಬಾಂಧವರು ಅಭಿನಂದಿಸಿದ್ದಾರೆ.

## ಎಸ್.ಆರ್.ಪಿ ಕೇಂದ್ರದಲ್ಲಿ ವಿಶೇಷಚೇತನ ಮಕ್ಕಳಿಗೆ ಫುಡ್ ಕಿಟ್, ತಾಯಂದಿರಿಗೆ ಸೀರೆ ವಿತರಣೆ

# ವಿಶೇಷಚೇತನ ಮಕ್ಕಳ ಆರೈಕೆ ಸವಾಲಿನದು

■ ವಿಜಯಸಾಕ್ಷಿ ಸುದ್ದಿ, ಗದಗ



ವಿಕಲಚೇತನ ಮಕ್ಕಳ ಆರೈಕೆಯು ಒಂದು ಸವಾಲಿನ ಹಾಗೂ ಜವಾಬ್ದಾರಿಯುತ ಕೆಲಸವಾಗಿದ್ದು, ಉತ್ತಮ ಆರೈಕೆ, ಪ್ರೋತ್ಸಾಹ ಹಾಗೂ ಬೆಂಬಲದಿಂದ ಇಂತಹ ಮಕ್ಕಳು ತಮ್ಮ ಜೀವನದಲ್ಲಿ ಯಶಸ್ಸಿನ ಮೆಟ್ಟಿಲೇರಿ ಸಾಧಕರ ಸಾಲಿನಲ್ಲಿರಬಹುದು. ಇವರ ಪೋಷಕರಿಗೆ ಸಮುದಾಯವು ಬೆಂಬಲವಾಗಿ ನಿಲ್ಲಬೇಕೆಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಸೋಮುವಾರ ಗದಗ ಶಹರದ ಸರ್ಕಾರಿ ಹೆಣ್ಣುಮಕ್ಕಳ ಶಾಲೆ ನಂ.4ರ ಎಸ್.ಆರ್.ಪಿ ಕೇಂದ್ರದಲ್ಲಿ ವಿಶೇಷಚೇತನ ಮಕ್ಕಳಿಗೆ ದಾನಿಗಳಾದ ನಿತ್ಯಾ ವಸ್ತ್ರದ ಅವರು ನೀಡಿದ ಫುಡ್ ಕಿಟ್ ಹಾಗೂ ವಿಶೇಷಚೇತನ ಮಕ್ಕಳ ತಾಯಂದಿರಿಗೆ ಸೀರೆ ವಿತರಿಸಿ ಮಾತನಾಡಿದರು.

ಅಂಗವಿಕಲ ಮಕ್ಕಳ ಆರೈಕೆಯಲ್ಲಿ ಸಮುದಾಯದ ಪಾತ್ರವೂ ಮಹತ್ವವಾಗಿದೆ. ಈ ಕುರಿತು ಸಮಾಜದಲ್ಲಿ ಅರಿವು, ಜಾಗೃತಿ ಮೂಡಿಸುವ ಕಾರ್ಯ ನಡೆಯಬೇಕಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಂಪನ್ಮೂಲ ವ್ಯಕ್ತಿ ಶ್ಯಾಮ ಲಾಂಡೆ ಮಾತನಾಡಿ, ವಿಶೇಷ ಚೇತನ ಮಕ್ಕಳ ಪೋಷಕರಿಗೆ ಬೆಂಬಲ ನೀಡುವುದು ಅವಶ್ಯಕವಾಗಿದ್ದು, ಪೋಷಕರು ಇಂತಹ ಮಕ್ಕಳನ್ನು ಹೇಗೆ ಆರೈಕೆ ಮಾಡಬೇಕು, ಮಗುವಿನ ಅಗತ್ಯತೆಗಳನ್ನು ಹೇಗೆ ಅರ್ಥೈಸಿಕೊಳ್ಳಬೇಕು ಎಂಬುದನ್ನು ತಿಳಿಸಿ ಹೇಳುವ ಹಾಗೂ ಸೂಕ್ತ ಮಾರ್ಗದರ್ಶನ ನೀಡುವುದು ಅವಶ್ಯ ಎಂದರು.

ಸಿ.ಆರ್.ಪಿ ಸಿದ್ಧಲಿಂಗಯ್ಯ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ವಿಶೇಷ ಮಕ್ಕಳನ್ನು ಶೈಕ್ಷಣಿಕವಾಗಿ ಬಲವರ್ಧನೆಗೊಳಿಸಲು ನಾವೆಲ್ಲರೂ ಪ್ರಯತ್ನಿಸಬೇಕು. ಇದಕ್ಕೆ ಸಮುದಾಯ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಇನ್ನರ್‌ವ್ಹೀಲ್ ಕ್ಲಬ್‌ನ ಸದಸ್ಯರಾದ ಸುಮಾ ಪಾಟೀಲ, ಮೀನಾಕ್ಷಿ ಕೊರವನವರ, ವೀಣಾ ಕೋಟಿ, ಶಿಲ್ಪಾ ಅಕ್ಕಿ ಮಾತನಾಡಿ, ಅಂಗವಿಕಲತೆ ಬಗೆಗೆ ಇರುವ ತಪ್ಪು ತಿಳುವಳಿಕೆ ಹೋಗಲಾಡಿಸಲು ನಾವು ಶ್ರಮಿಸಬೇಕು. ಇವರ ಆರೋಗ್ಯ ಜಾಗೃತಿಗಾಗಿ ಮೇಲಿಂದ ಮೇಲೆ ವೈದ್ಯರ ಭೇಟಿ, ಚಿಕಿತ್ಸೆ ಜೊತೆಗೆ ಶೈಕ್ಷಣಿಕವಾಗಿ ಪ್ರಗತಿ ಹೊಂದಲು ನಾವೆಲ್ಲರೂ ಶ್ರಮಿಸಿ ಪ್ರೋತ್ಸಾಹ ನೀಡಬೇಕೆಂದರು.

ಕಾರ್ಯದರ್ಶಿ ಶಿವಲೀಲಾ ಅಕ್ಕಿ ಮಾತನಾಡಿ, ಸಾಧಿಸಲು ಅಸಾಧ್ಯವೆಂಬುದು ಯಾವುದೂ ಇಲ್ಲ. ಇಂತಹ ಮಕ್ಕಳ ಬೆಳವಣಿಗೆಯಲ್ಲಿ ಎಲ್ಲರೂ ಸಹಾಯ ಹಸ್ತ ಚಾಚುವ ಗುಣ ಬೆಳೆಸಿಕೊಂಡಾಗ ಇವರೂ ಸಹಿತ ಎಲ್ಲರಂತೆ ಆಗಿ ಸಾಧಕರಾಗಿ ಮಾದರಿಯಾಗಬಲ್ಲರು ಎಂದರು.

ವೇದಿಕೆಯ ಮೇಲೆ ನೀಲಮ್ಮ ಮುರಗೇಂದ್ರ ವಸ್ತ್ರದ ಉಪಸ್ಥಿತರಿದ್ದರು. ಸುನೀತಾ ತಿಮ್ಮನಗೌಡ್ರ ಸ್ವಾಗತಿಸಿದರು. ಶ್ರೀಮತಿ ಕಟಗಿ ನಿರೂಪಿಸಿದರು. ಮಾಲನ್‌ಬಿ ಹೊಸಳ್ಳಿ ವಂದಿಸಿದರು. ವಿಶೇಷಚೇತನ ಮಕ್ಕಳು, ಪಾಲಕರಾದ ಆಯೀಶಾ ಬಾನು ನದಾಫ್, ನೀಲವ್ವ ಕಳಸಿ, ಪೀತಂ ಕೊಪ್ಪಳ, ಈರವ್ವ ಪಡಸಾಲಿ, ಗಂಗಾ ಸೋನಕರ ಸೇರಿದಂತೆ ಶಿಕ್ಷಕರು ಉಪಸ್ಥಿತರಿದ್ದರು.

ಕ್ಲಬ್‌ನ ಅಧ್ಯಕ್ಷೆ ಅಶ್ವಿನಿ ಜಗತಾಪ ಮಾತನಾಡಿ, ವಿಶೇಷ ಚೇತನ ಮಕ್ಕಳ ಪಾಲಕರು ಎಂದೂ ಧೈರ್ಯಗುಂದದೇ ಇರಬೇಕು. ಈಗಾಗಲೇ ವಿಕಲಚೇತನರು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವುದನ್ನು ಮಾದರಿಯಾಗಿಸಿಕೊಂಡು ಮಕ್ಕಳನ್ನು ಪೋಷಿಸಬೇಕು. ಅವರಲ್ಲಿರುವ ಪ್ರತಿಭೆಗೆ ಸೂಕ್ತ ಪ್ರೋತ್ಸಾಹ ನೀಡಬೇಕು ಎಂದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಸಂಸ್ಥೆಯಲ್ಲಿ ಖಾಲಿಯಿರುವ 01 ಉಪನ್ಯಾಸಕರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾಲಯದಿಂದ ವಿಜ್ಞಾನ/ಗಣಿತ ವಿಷಯದಲ್ಲಿ ಸ್ನಾತಕೋತ್ತರ ಪದವಿ (ಎಂ.ಎಸ್ಸಿ) ( physics/Mathematics ) ಜೊತೆಗೆ ಬಿ.ಎಸ್ಸಿ (ಪಿ.ಸಿ.ಎಮ್) ಪದವಿಯಲ್ಲಿ ಪ್ರಥಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದು, ಕನಿಷ್ಠ 02 ವರ್ಷ ಬೋಧನಾ ಅನುಭವವನ್ನು ಮಾನ್ಯತೆ ಹೊಂದಿದ ಡಿಪ್ಲೋಮಾ/ಎಂಜಿನಿಯರಿಂಗ್/ವಿದ್ಯಾ ಸಂಸ್ಥೆಗಳಲ್ಲಿ ಅನುಭವವನ್ನು ಹೊಂದಿರಬೇಕು. ನುರಿತ ಮತ್ತು ಸ್ನಾತಕೋತ್ತರ ಪದವಿ ಹೊಂದಿದವರಿಗೆ ಆದ್ಯತೆ ನೀಡಲಾಗುವುದು. ಈ ಹುದ್ದೆಯ ತಾತ್ಕಾಲಿಕವಾಗಿದ್ದು ಪ್ರತಿ ಮಾಹೆಗೆ ರೂ.28,750/-ಗೌರವಧನ ನೀಡಲಾಗುವುದು. ಅಭ್ಯರ್ಥಿಗಳು 45 ವರ್ಷಗಳಿಂತ ಕಡಿಮೆ ವಯೋಮಿತಿಯಲ್ಲಿರಬೇಕು.

ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂಖ್ಯೆ: 08372-259664/9743499065 ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102" ಇವರಿಗೆ 10-07-2025 ರ ಮಧ್ಯಾಹ್ನ 3.00 ಗಂಟೆಯೊಳಗಾಗಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ ಬೆಟಗೇರಿ ದೂರವಾಣಿ ಸಂಖ್ಯೆ : 08372-259664 ಸಂಪರ್ಕಿಸಬಹುದಾಗಿದೆ.

### ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಶಿರಹಟ್ಟಿ ಬಸ್ ನಿಲ್ದಾಣದ ಪರಿಶೀಲನೆ

# ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಯಾಣಿಕರ ಆರೋಗ್ಯ ರಕ್ಷಣೆಗಾಗಿ ಬಸ್ ನಿಲ್ದಾಣ ಆವರಣದ ಸ್ವಚ್ಛತೆಗೆ ಪ್ರಥಮಾದ್ಯತೆ ನೀಡಬೇಕು ಎಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಸೂಚಿಸಿದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಸೋಮವಾರ ಶಿರಹಟ್ಟಿ ನಗರದ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ವ್ಯವಸ್ಥೆಯ ಪರಿಶೀಲನೆ ನಡೆಸಿ ಅವರು ಮಾತನಾಡಿದರು.



ಜುಲೈ 20ರಂದು ಪುನಃ ಬಸ್ ನಿಲ್ದಾಣದ ಸ್ವಚ್ಛತೆಯ ಪರಿಶೀಲನೆಗಾಗಿ ಆಗಮಿಸುವುದಾಗಿ ತಿಳಿಸಿದ ಅವರು, ಈಗ ನೀಡಿರುವ ಎಲ್ಲ ಸೂಚನೆಗಳು ಕಾರ್ಯರೂಪಕ್ಕೆ ಬರುವಂತೆ ನೋಡಿಕೊಳ್ಳಬೇಕು. ಇಲ್ಲವಾದಲ್ಲಿ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹಿಸಲಾಗುವುದು. ನಿಲ್ದಾಣದಲ್ಲಿ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಶಾಲೆಯ ವಿದ್ಯಾರ್ಥಿಗಳಿಗೆ ಗ್ರಾಮಗಳಿಂದ ಶಿರಹಟ್ಟಿಗೆ ಬಂದು ಹೋಗಲು ಸರಿಯಾದ ಬಸ್ಸಿನ ವ್ಯವಸ್ಥೆ ಮಾಡಬೇಕು ಎಂದು ಬಿ.ಬಿ. ಅಸೂಟಿ ನಿರ್ದೇಶನ ನೀಡಿದರು.

ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು, ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಸ್ವಚ್ಛವಾಗಿರುವಂತೆ ನೋಡಿಕೊಳ್ಳಲು ಸಾರಿಗೆ ಸಂಸ್ಥೆಯ ಅಧಿಕಾರಿ ಡಿ.ಸಿ. ದೇವರಾಜ ಅವರಿಗೆ ನಿರ್ದೇಶನ ನೀಡಿದರು.

ಶಿರಹಟ್ಟಿ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ ಮಾತನಾಡಿ, ಪ್ರತಿ ಪಂಚಾಯಿತಿ ಮಟ್ಟದಲ್ಲಿ ಗ್ಯಾರಂಟಿ ಸಭೆಗಳನ್ನು ನಡೆಸಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಪ್ರಚಾರ ಮಾಡಬೇಕೆಂದರು.

ಜಿಲ್ಲಾ ಸಮಿತಿಯ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಸರ್ಕಾರದ ಮಹಾತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳು ದುರ್ಬಲರನ್ನು ಆರ್ಥಿಕ ಸಬಲರನ್ನಾಗಿ ಮಾಡುತ್ತಿವೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಶಿವನಗೌಡ ಪಾಟೀಲ, ಮಲ್ಲಪ್ಪ ಹುಯಲಗೋಳ, ಬುಡೆನಸಾಬ್ ಮಕಾನದಾರ, ದೇವಪ್ಪ ಲಮಾಣಿ, ವಿಶಾಲ ಹೊನ್ನಣ್ಣವರ, ಸುರೇಶರಡ್ಡಿ ಕೆಂಚರೆಡ್ಡಿ, ಶಕುಂತಲಾ ವಿಭೂತಿಮಠ, ಹೊನ್ನೇಶ್ ಪೋಟಿ, ಮಹಾವೀರ್ ಮಂಟಗನ್ನಿ, ಅಂದನಗೌಡ ಪಾಟೀಲ್, ಸೋಮನಗೌಡ ಮರಿಗೌಡ, ಪ್ರಮುಖರಾದ ಹೂಮಾಯನ್ ಮಾಗಡಿ, ಪವನ್ ಈಳಿಗೇರ, ಹಸನ್ ಸಾಬ್ ನದಾಫ್, ಸಂತೋಷ್ ಕುರಿ, ಸಂಗಪ್ಪ ಕೆರಕಲಮಟ್ಟಿ, ಚಾಂದಸಾಬ ಕೊಟ್ಟೂರ ಮತ್ತಿತರರು ಹಾಜರಿದ್ದರು.

ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿರುವುದು ಅಕ್ಷರಶಃ ಸತ್ಯ ಎಂದು ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಚ್.ಕೆ. ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ, ಅಲ್ಲಿಯೂ ಸಹ ಸ್ವಚ್ಛತೆ ಅಗತ್ಯವಾಗಿದೆ. ವಿಕಲಚೇತನರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮಾಡಬೇಕು. ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು, ಪುನಃ ದೂರುಗಳು ಬರದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಗಾ ವಹಿಸಲು ಬಿ.ಬಿ. ಅಸೂಟಿ ಸೂಚಿಸಿದರು.

### ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಯ ಧರ್ಮಸಭೆ ಉದ್ಘಾಟನೆ

# ನೆಮ್ಮದಿಯ ಬದುಕಿಗೆ ಧರ್ಮ ಬೋಧನೆಗಳು ಅವಶ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ನೆಮ್ಮದಿಯ ಬದುಕಿಗೆ, ಮಾನವ ಕಲ್ಯಾಣಕ್ಕಾಗಿ ಆಧ್ಯಾತ್ಮಿಕ ಚಿಂತನೆಗಳು, ಧರ್ಮ ಬೋಧನೆಗಳು ಅವಶ್ಯ ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ ಹೇಳಿದರು.

ಅವರು ನಗರದ ಗಾಣಿಗ ಭವನದಲ್ಲಿ ಗದಗ-ಬೆಟಗೇರಿ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಶ್ರೀಮದ್ ಕಾಶೀ ನೂತನ ಜಗದ್ಗುರುಗಳವರ ಆಷಾಡ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ 10 ದಿನಗಳ ಮಾಲಿಕೆಯನ್ನು ಉದ್ಘಾಟಿಸಿ ಮಾತನಾಡಿದರು.

ನೈತಿಕ ಮೌಲ್ಯಗಳು ಕುಸಿಯುತ್ತಿರುವ ಇಂದಿನ ದಿನಗಳಲ್ಲಿ ಜನತೆಗೆ ಮಾನಸಿಕ ನೆಮ್ಮದಿ ಇಲ್ಲದಂತಾಗಿದೆ. ಹಣ-ಅಧಿಕಾರದ ಹಿಂದೆ ಬಿದ್ದು ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದೇವೆ. ಇಂದು ಮಾನವ ಮಾನವನಾಗಿ ಬದುಕಬೇಕು. ಅದಕ್ಕಾಗಿ ವೀರಶೈವ ಧರ್ಮವನ್ನು ಬೋಧಿಸುವ ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಸುವ ಸಿದ್ಧಾಂತ ಶಿಖಾಮಣಿಯ ಆಧ್ಯಾತ್ಮಿಕ ಪ್ರವಚನವನ್ನು ನಾವಿಂದು ಆಲಿಸಬೇಕಿದೆ ಎಂದರು.

ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಜಂಗಮವಾಡಿಮಠ ವಾರಣಾಸಿ ಕಾಶೀ ಮಹಾಪೀಠದ ಶ್ರೀಮತ್ ಕಾಶೀ ಜ್ಞಾನಸಿಂಹಾಸನಾಧೀಶ್ವರ ಜ. ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು, ವೀರಶೈವ ಲಿಂಗಾಯತ ಧರ್ಮಕ್ಕೆ ಧರ್ಮ ಗ್ರಂಥವಾಗಿರುವ ಶ್ರೀ ಸಿದ್ಧಾಂತ ಶಿಖಾಮಣಿ ಸಾಧಕರನ್ನು ಸಾಧನೆಯ ಮಾರ್ಗಕ್ಕೆ, ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಸುವಂತದ್ದು ಎಂದರು. ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಶ್ರೀ ಸಿದ್ಧಾಂತ ಶಿಖಾಮಣಿ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಗಣ್ಯರಾದ ಶರಣಬಸಪ್ಪ ಗುಡಿಮನಿ, ಬಸವರಾಜ ಬಿಂಗಿ, ಶ್ರೀಕಾಂತ ಲಕ್ಕುಂಡಿ, ರಾಜು ಕುರಡಗಿ, ಮುರುಗೇಶ ಬಡ್ನಿ, ವೀರಣ್ಣ ಕರಬಿಷ್ಠಿ, ಫಕ್ಕೀರಪ್ಪ ಹೆಬಸೂರ, ಶಿವಾನಂದಯ್ಯ ಹಿರೇಮಠ, ಸಿ.ಕೆ. ಮಾಳಶೆಟ್ಟಿ, ಶಂಕರ ಹಾನಗಲ್ಲ, ಜಿ.ಎಸ್.ಗಡ್ಡದೇವರಮಠ, ಗುರಣ್ಣ ಬಳಗಾನೂರ, ಶ್ವೇತಾ ದಂಡಿನ, ವಿಜಯಲಕ್ಷ್ಮೀ ದಿಂಡೂರ ಅವರಿಗೆ ಪೂಜ್ಯರು ಸನ್ಮಾನಿಸಿ ಆಶೀರ್ವದಿಸಿದರು.

ಕಾಂಚನಮಾಲಾ ಬಾಳಿಹಳ್ಳಿಮಠ, ಶಿವಯೋಗಿ ತೆಗ್ಗಿನಮಠ, ಸಿ.ಜಿ. ಜಿನಗಾ, ಈಶ್ವರಪ್ಪ ಮುನವಳ್ಳಿ, ಬಸವರಾಜ ಹೆರಕಲ್, ಜಾಹ್ನವಿ ದೇಸಾಯಿ ಅವರಿಗೆ ಪೂಜ್ಯರು ಸನ್ಮಾನಿಸಿ ಆಶೀರ್ವದಿಸಿದರು.

ಡಾ. ಶಿವಬಸಯ್ಯ ಗಡ್ಡದಮಠ ಪ್ರಾರ್ಥಿಸಿದರು. ಮಂಜುನಾಥ ಬೇಲೇರಿ ಸ್ವಾಗತಿಸಿದರು. ಚಂದ್ರು ಬಾಳಿಹಳ್ಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು ವ್ಹಿ.ಕೆ. ಗುರುಮಠ ನಿರೂಪಿಸಿ ವಂದಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಗದುಗಿನಲ್ಲಿ ಶ್ರೀಮತ್ ಕಾಶೀ ಪೀಠದ ಹಿರಿಯ ಜಗದ್ಗುರುಗಳು ಪ್ರತಿ ವರ್ಷ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ನಡೆಸಿದ ಪರಿಣಾಮವಾಗಿ ಗದಗ ಪರಿಸರದಲ್ಲಿ ಧರ್ಮಜಾಗೃತಿ, ಆಧ್ಯಾತ್ಮಿಕ ಚಿಂತನೆಗಳು ಜನತೆಯನ್ನು ಸನ್ಮಾರ್ಗದಲ್ಲಿ ಮುನ್ನಡೆಸಿವೆ ಎಂದರು.

# ಬೀದಿ ಬದಿ ವ್ಯಾಪಾರಸ್ಥರ ಸಂಘಕ್ಕೆ ಕೊಠಡಿ ನೀಡಲು ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಭಾನು ಮಾರ್ಕೆಟ್‌ನ ವಾಣಿಜ್ಯ ಸಂಕೀರ್ಣದ ಮೇಲಂತಸ್ತಿನ ಕಟ್ಟಡದಲ್ಲಿ ಖಾಲಿ ಇರುವ ಕೊಠಡಿಯನ್ನು ಬೀದಿ ಬದಿ ವ್ಯಾಪಾರಸ್ಥರ ಸಂಘದ ಕಾರ್ಯಾಲಯಕ್ಕೆ ಬಳಸಿಕೊಳ್ಳಲು ಕೊಡಬೇಕೆಂದು ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ ಅವರ ನೇತೃತ್ವದಲ್ಲಿ ಪುರಸಭೆಗೆ ಮನವಿ ಸಲ್ಲಿಸಲಾಯಿತು.

ಮನವಿ ಪತ್ರದಲ್ಲಿ, ಮುಖ್ಯ ಬಜಾರ್‌ನಲ್ಲಿನ ಪುರಸಭೆ ವಾಣಿಜ್ಯ ಸಂಕೀರ್ಣದ ಮೇಲಂತಸ್ತಿನಲ್ಲಿ ಹಲವು ಕೊಠಡಿಗಳು ಖಾಲಿ ಇವೆ. ಬೀದಿ ಬದಿ ವ್ಯಾಪಾರಸ್ಥರ ಸಂಘಕ್ಕೆ ಇಲ್ಲಿರುವ ಕೊಠಡಿ ನೀಡಿದರೆ ಅನಕೂಲವಾಗುತ್ತದೆ. ಈಗಾಗಲೇ ಒಂದಷ್ಟು ಸಂಘಕ್ಕೆ ಕೊಠಡಿ ನೀಡಲಾಗಿದ್ದು, ನಮ್ಮ ಮನವಿ ಪುರಸ್ಕರಿಸಿ ಅವಕಾಶ ಕೊಡಬೇಕು. ಖಾಲಿ ಇರುವ ಕೊಠಡಿಯನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡಿಕೊಳ್ಳುತ್ತೇವೆ ಎಂದು ಕೋರಲಾಗಿದೆ. ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಮಾಂತೇಶ ಬೀಳಗಿ, ತಮ್ಮ ಮನವಿಯನ್ನು ಆಡಳಿತ ಮಂಡಳಿಯ ಗಮನಕ್ಕೆ ತಂದು ನಿರ್ಧರಿಸಲಾಗುವುದು ಎಂದರು.

ಈ ವೇಳೆ ಮುನೀರ ಸಿದ್ಧಾಪುರ, ಹನಮಂತಪ್ಪ ರಾಮಗೇರಿ, ಮೆಹಬೂಬ ಜಮಾಲಾಖಾನವರ, ಪರಶೂರಾಮ ಬಳ್ಳಾರಿ, ಸೋಮಪ್ಪ ಗೌರಿ, ಲಕ್ಷ್ಮಣ ಮುಳಗುಂದ, ಶಬ್ಬೀರ ಶಿರಹಟ್ಟಿ, ದಾದಪೀರ ಬೆಂಡಿಗೇರಿ ಮುಂತಾದವರಿದ್ದರು.

# ನೂತನ ಶಾಲಾ ಕೊಠಡಿ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ರಣತೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕೊಠಡಿಗಳನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮಸ್ಥರ ಬಹುದಿನಗಳ ಬೇಡಿಕೆ ಈಡೇರಿದ್ದು, ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಉತ್ತಮವಾಗಿ ವಿದ್ಯಾಭ್ಯಾಸ ಮಾಡಬೇಕು. ಗ್ರಾಮೀಣ ಪ್ರದೇಶಗಳ ಸರಕಾರಿ ಶಾಲೆಗಳಿಗೆ ಅವಶ್ಯಕವಿರುವ ಮೂಲಸೌಲಭ್ಯ ಕಲ್ಪಿಸಲು ಪ್ರಯತ್ನಿಸಲಾಗುವುದು. ವಿದ್ಯಾರ್ಥಿಗಳು ಸತತ ಪರಿಶ್ರಮದಿಂದ ಜೀವನದಲ್ಲಿ ಯಶಸ್ಸನ್ನು ಸಾಧಿಸಬೇಕೆಂದು ಹೇಳಿದರು. ಗ್ರಾ.ಪಂ ಅಧ್ಯಕ್ಷೆ ವಿಜಯಲಕ್ಷ್ಮೀ ಚವ್ಹಾಣ, ಎಸ್‌ಡಿಎಂಸಿ ಅಧ್ಯಕ್ಷ ಚಂದ್ರಶೇಖರ ದಾನಮ್ಮನವರ,



ಸಂತೋಷ ಓಬಾಜಿ, ಬಿಇಓ ಎಚ್.ಎನ್. ನಾಯ್ಕ, ಬಿ.ಡಿ. ಪಲ್ಲೇದ, ಜಾನು ಲಮಾಣಿ, ಶಂಕರ ಮರಾಠೆ, ಅಶೋಕ ಬಳ್ಳಾರಿ, ಸುರೇಶ ಸಣ್ಣತಂಗಿ, ವಿಠೋಬ ಬಡಕಂಡಪ್ಪನವರ, ಫಕ್ಕೀರೇಶ ವಾರದ, ಧರ್ಮಣ್ಣ ಚವ್ಹಾಣ, ಬಸಪ್ಪ ಪ್ಯಾಟಿ, ಮಲ್ಲನಗೌಡ ಪಾಟೀಲ, ಗಂಗಾಧರ ಬಳಿಗಾರ, ಶಿವಯೋಗಪ್ಪ ನಿರ್ವಾಣಶೆಟ್ಟರ, ಹನುಮಂತಪ್ಪ ದೊಡ್ಡಮನಿ, ಹನುಮಂತಪ್ಪ ಸಂಗಮ್ಮನವರ, ಅರ್ಜುನಪ್ಪ ಸಂಗಮ್ಮನವರ, ಕುರುಗೋಡಪ್ಪ ಬಡಖಂಡಪ್ಪನವರ, ದೇವಪ್ಪ ಮಾಗಡಿ, ಅಜ್ಜಪ್ಪ ಛಬ್ಬಿ, ಪರಶುರಾಮ ವಡವಿ, ಮಲ್ಲಪ್ಪ ಪ್ಯಾಟಿ, ಭಾರ್ಗವ ಗದಗ, ಶ್ರೀಕಾಂತ ಕಮ್ಮಾರ, ದೇವು ಶಲವಡಿ, ಶಾಂತಮ್ಮ ತಳವಾರ, ಹನುಮಂತ ದಾಸರ, ರಾಜು ಪರಸಪ್ಪನವರ, ಲಕ್ಷ್ಮಣ ಮರಾಠೆ, ಪಿಡಿಓ ಅನಿತಾ ಮಾಢಳ್ಳಿ ಮುಂತಾದವರು ಉಪಸ್ಥಿತರಿದ್ದರು.

# ಪಾರದರ್ಶಕ ಚುನಾವಣೆಗೆ ಎಸ್‌ಡಿಪಿಐ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ಆಡಳಿತ ಮಂಡಳಿಗೆ ನಡೆಯಬೇಕಿರುವ ಚುನಾವಣೆ ಪ್ರಕ್ರಿಯೆಯನ್ನು ಅನಗತ್ಯವಾಗಿ ವಿಳಂಬಗೊಳಿಸಲಾಗುತ್ತಿದೆ. ಶಿಕ್ಷಣ ಮತ್ತು ಸಮುದಾಯ ಸೇವೆಯಲ್ಲಿ ಅಪಾರ ಸೇವೆ ಸಲ್ಲಿಸುತ್ತಿರುವ ಇಂತಹ ಮಹತ್ವದ ಸಂಸ್ಥೆಯ ಆಡಳಿತಾತ್ಮಕ ಶಿಷ್ಟಾಚಾರಗಳ ಹಾಗೂ ಬದ್ಧತೆ-ಯ ದಿಕ್ಕು ತಪ್ಪಿಸುವ ಪರಿಸ್ಥಿತಿ ನಿರ್ಮಾಣವಾಗುತ್ತಿರುವುದನ್ನು ಎಸ್‌ಡಿಪಿಐ ಗದಗ ಜಿಲ್ಲಾಧ್ಯಕ್ಷ ಬಿಲಾಲ ಗೋಕಾವಿ ಖಂಡಿಸಿದ್ದಾರೆ.



ಯಾವುದೇ ಸ್ಥಳೀಯ ರಾಜಕೀಯ ವ್ಯಕ್ತಿಗಳ ಅಥವಾ ರಾಜಕಾರಣಿಗಳ ಬಾಹ್ಯ ಒತ್ತಡಗಳ ಅಡಿಯಲ್ಲಿ ನಿರ್ಧಾರಗಳನ್ನು ಕೈಗೊಳ್ಳದೆ, ಸಂಪೂರ್ಣವಾಗಿ ನ್ಯಾಯಸಮ್ಮತ, ಪಾರದರ್ಶಕ ಮತ್ತು ಸಮಯಬದ್ಧವಾಗಿ ಚುನಾವಣೆ ಪ್ರಕ್ರಿಯೆಯನ್ನು ನಡೆಸಬೇಕು.

ಸ್ಥಳೀಯ ಸಮುದಾಯದ ನಂಬಿಕೆ ಮತ್ತು ವಿಶ್ವಾಸ ಉಳಿಸಿಕೊಳ್ಳಬೇಕಾದದ್ದು ಸಂಬಂಧಿತ ಆಡಳಿತ ಮತ್ತು ಚುನಾವಣೆ ಅಧಿಕಾರಿಗಳ ನೈತಿಕ ಜವಾಬ್ದಾರಿಯಾಗಿದೆ. ಶೀಘ್ರದಲ್ಲಿ ಚುನಾವಣೆ ಘೋಷಣೆ ಮಾಡದಿದ್ದಲ್ಲಿ ಮುಂದೆ ಗದಗ ನಗರದ ಜಾಗೃತ ಯುವ ಸಮೂಹ ಹಾಗೂ ಸಮಾಜದ ಮುಖಂಡರು ಸೇರಿ ವಕ್ಫ್ ಇಲಾಖೆ ಅಧಿಕಾರಿಗಳ ವಿರುದ್ಧ ಗದಗ ಜಿಲ್ಲಾಧಿಕಾರಿ ಕಛೇರಿ ಮುಂದೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

# ಕರವೇ ತಾಲೂಕು ವಕ್ತಾರರಾಗಿ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ ನಿರ್ದೇಶನದಂತೆ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಎಚ್.ಎಚ್. ಅಬ್ಬಿಗೇರಿಯವರ ಆದೇಶದ ಮೇರೆಗೆ ಗದಗ ತಾಲೂಕು ವಕ್ತಾರರನ್ನಾಗಿ ರೆಹಮಾನಸಾಬ ದರ್ಗಾದ ಇವರನ್ನು ನೇಮಕ ಮಾಡಿ ಆದೇಶಿಸಲಾಯಿತು.

ಈ ಸಂದರ್ಭದಲ್ಲಿ ಗದಗ ತಾಲೂಕು ಅಧ್ಯಕ್ಷ ಮುತ್ತಣ್ಣ ಚವಡಣ್ಣವರ, ಜಿಲ್ಲಾ ಮತ್ತು ತಾಲೂಕು ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಗೃಹರಕ್ಷಕ ದಳದ 21ನೇ ವಾರ್ಷಿಕೋತ್ಸವದಲ್ಲಿ ಕಾರ್ಯಾಲಯದ ಉದ್ಘಾಟನೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಗೃಹರಕ್ಷಕರ ಪಾತ್ರ ಅತ್ಯಂತ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೀವನದಲ್ಲಿ ಎದುರಾಗುವ ಎಡರು-ತೊಡರುಗಳನ್ನು ಸಮರ್ಥವಾಗಿ ಎದುರಿಸಿ ಸಮರ್ಪಕವಾಗಿ ಮುನ್ನಡೆದಾಗ ನಮಗೆ ಯಶಸ್ಸು ಸಿಗಲು ಸಾಧ್ಯ. ಗೃಹರಕ್ಷಕ ಸಿಬ್ಬಂದಿಗಳು ಕೂಡ ತಮ್ಮೆಲ್ಲ ಸಮಸ್ಯೆಗಳನ್ನು ಮೆಟ್ಟಿ ನಿಂತು ಸಮಾಜಕ್ಕಾಗಿ ದುಡಿಯುತ್ತಿದ್ದಾರೆ. ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಗೃಹರಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಶಾಸಕ, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಜಿ.ಎಸ್. ಪಾಟೀಲ ಹೇಳಿದರು.

ಅವರು ಸ್ಥಳೀಯ ಗಾಂಧಿ ಭವನದಲ್ಲಿ ನಡೆದ ಗೃಹರಕ್ಷಕ ದಳದ 21ನೇ ವಾರ್ಷಿಕೋತ್ಸವ ಮತ್ತು ಕಾರ್ಯಾಲಯದ ಉದ್ಘಾಟನೆ ಹಾಗೂ ವಿಶ್ವ ಪರಿಸರ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.




ಭಾರತದ ಆಂತರಿಕ ಭದ್ರತೆಯನ್ನು ಕಾಪಾಡಲು ಹಾಗೂ ಪೊಲೀಸ್ ಇಲಾಖೆಗೆ ಪೂರಕವಾಗಿ ಕಾರ್ಯನಿರ್ವಹಿಸಲು ನೆರವಾಗುವ ನಾಗರಿಕ ಸ್ವಯಂ ಸೇವಕದಳ ಗೃಹ ರಕ್ಷಕದಳವಾಗಿದ್ದು, ಸದಸ್ಯರು ಪೊಲೀಸರಿಗೆ ಸಹಾಯಕರಾಗಿ ಕಾರ್ಯ ನಿರ್ವಹಿಸುವ ಮೂಲಕ ತುರ್ತು ಪರಿಸ್ಥಿತಿಯಲ್ಲಿ ನೆರವಾಗುವ ಮಹತ್ತರ ಸಂಸ್ಥೆ ಇದಾಗಿದೆ ಎಂದರು.

ಕಾರ್ಯಕ್ರಮದ ನೇತೃತ್ವವನ್ನು ಸಿದ್ದನಕೊಳ್ಳದ ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳು ವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಗೃಹರಕ್ಷಕ ದಳದ ಜಿಲ್ಲಾ ಸಮಾದೇಷ್ಟರಾದ ಎಮ್.ಬಿ. ಸಂಕದ ವಹಿಸಿದ್ದರು. ವೇದಿಕೆ ಮೇಲೆ ರವೀಂದ್ರನಾಥ ದೊಡ್ಡಮೇಟಿ, ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ, ಸಿಪಿಐ ಎಸ್.ಎಸ್. ಬೀಳಗಿ, ಪಿಎಸ್‌ಐ ಐಶ್ವರ್ಯ ನಾಗರಾಳ, ಗೃಹರಕ್ಷಕ ದಳದ ನರೇಗಲ್ಲ ಘಟಕದ ಮುಖ್ಯಸ್ಥ ಸುರೇಶ ಹಳ್ಳಿಕೇರಿ, ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಬಸವರಾಜ ಗೂಳರಡ್ಡಿ, ಜಿಲ್ಲಾ ಬೋಧಕರು, ಗೃಹರಕ್ಷಕ ದಳದ ಕಿರಣಕುಮಾರ ಕಟಗಿ, ಟಿ.ಎಲ್. ರಾಜಕುಮಾರ, ನಿವೃತ್ತ ಶಿಕ್ಷಕ ಎಮ್.ಎಸ್. ಧಡೆಸೂರಮಠ, ಅಂದಪ್ಪ ಬಿಚ್ಚೂರ, ಶಿವನಗೌಡ ಪಾಟೀಲ, ಜಿಲ್ಲಾ ಕರವೇ ಅಧ್ಯಕ್ಷ ಹನಮಂತಪ್ಪ ಅಬ್ಬಿಗೇರಿ ಮುಂತಾದವರಿದ್ದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಸೇವಾ ಮನೋಭಾವವನ್ನು ಮೈಗೂಡಿಸಿಕೊಂಡು ಬಂದಿರುವ ಏಕೈಕ ಸಂಸ್ಥೆಯೇ ಗೃಹರಕ್ಷಕ ದಳವಾಗಿದ್ದು, ನರೇಗಲ್ಲ ಹಾಗೂ ಸುತ್ತಮುತ್ತಲ 20 ಗ್ರಾಮಗಳಲ್ಲೂ ಸೇವೆ ಸಲ್ಲಿಸುತ್ತಿದ್ದು, ಸಾಮಾಜಿಕ ಧಾರ್ಮಿಕ ಕಾರ್ಯಗಳಲ್ಲೂ ಗೃಹರಕ್ಷಕ ದಳದ ಕಾರ್ಯ ಶ್ಲಾಘನೀಯ ಎಂದರು.

# ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರ ಪ್ರದಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಶಿಕ್ಷಣಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಗದಗ ತಾಲೂಕಿನ ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸಗೈದು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಆಯಾ ಶಾಲೆಗೆ ಮೊದಲ 5 ಸ್ಥಾನಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಿದೆ.

ಜು. 2ರಂದು ಮುಂಜಾನೆ 10.30 ಗಂಟೆಗೆ ಗದಗ ತಾಲೂಕಿನ ಬೆಳಹೊಡ ಗ್ರಾಮದ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 12 ಗಂಟೆಗೆ ಶ್ಯಾಗೋಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 1.30ಕ್ಕೆ ಹಿರೇಹಂದಿಗೋಳ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಮೊದಲ 5 ಸ್ಥಾನಗಳನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವದು.

ಜು. 3ರಂದು ಮುಂಜಾನೆ 10.30 ಗಂಟೆಗೆ ಗದಗ ತಾಲೂಕಿನ ಅಂತೂರ ಬೆಂತೂರ ಗ್ರಾಮದ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 12 ಗಂಟೆಗೆ ಹುಲಕೋಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಮೊದಲ 5 ಸ್ಥಾನಗಳನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವದು ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ತಿಳಿಸಿದ್ದಾರೆ.


ಕರ್ನಾಟಕ ಸರ್ಕಾರ (ಜಿಲ್ಲಾ ಪಂಚಾಯತ ಗದಗ)

**ಆಡಳಿತ ವೈದ್ಯಾಧಿಕಾರಿಗಳ ಕಛೇರಿ, ತಾಲೂಕಾ ಆಸ್ಪತ್ರೆ, ಮುಂಡರಗಿ-582118 ತಾ॥ ಮುಂಡರಗಿ ಜಿ॥ ಗದಗ**

Ph: 08371-262210 Email : talukahospitalmundaragi@gmail.com

ಕ್ರ.ಸಂ:ತಾಸಾಆಮು/ಸಿ.ಆರ್/ಟೆಂಡರ್/112/ಡಯಟ್/2025-26 ದಿನಾಂಕ: 30-06-2025

**ಟೆಂಡರ್ ಪ್ರಕಟಣೆ**

2025-26 ನೇ ಸಾಲಿಗಾಗಿ ತಾಲೂಕಾ ಆಸ್ಪತ್ರೆ ಒಳರೋಗಿಗಳಿಗೆ ಸಿದ್ಧಪಡಿಸಿದ ಪಥ್ಯಾಹಾರ ಪೂರೈಕೆಗೆ ನೀಡುವ ಕುರಿತು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in/ ಮೂಲಕ Tender Reference No-DHFWS/2025-26/SE1591 ಸಂಖ್ಯೆಯನ್ನು ಬಳಸಿಕೊಂಡು ಪರಿಶೀಲಿಸಬಹುದಾಗಿದೆ.

ಸಹಿ/- ಆಡಳಿತ ವೈದ್ಯಾಧಿಕಾರಿಗಳು, ತಾಲೂಕಾ ಸಾರ್ವಜನಿಕ ಆಸ್ಪತ್ರೆ, ಮುಂಡರಗಿ.

ವಾಸಾಸಂಇ/ಗದಗ/ಕೆ.ಎಸ್.ಎಂ.ಸಿ.ಎ/143/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka